# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 182 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 07–02–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 182 | RNI No: KARKAN/2023/88462 | KA/SK/CTA-874/2024-2026 | Chitradurga | Date: 07-02-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು
ದಾಳಿಂಬೆಯಲ್ಲಿ ಸಮಗ್ರ ಬೆಳೆ ನಿರ್ವಹಣೆಯಿಂದ ಗುಣಮಟ್ಟದ ಇಳುವರಿ 2
ಮಹಾತ್ಮ ಗಾಂಧಿ ನರೇಗಾ ಹಬ್ಬ: ಚಿತ್ರದುರ್ಗ ಜಿಲ್ಲೆಗೆ 3 ಪ್ರಶಸ್ತಿಗಳ ಗರಿ 3
ಮಕ್ಕಳ ಸುರಕ್ಷತೆ: ಶಾಲಾ ವಾಹನಗಳ ನಿಯಮ ಪಾಲನೆ ಕಡ್ಡಾಯ ಅನುಸರಿಸಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಶ್ರವಣ ಸಾಧನ ವಿತರಣೆ

» ಚಿತ್ರದುರ್ಗ

ಭಾರತೀಯ ರೆಡ್ ಕ್ರಾಸ್ ಸೊಸೈಟಿ ಚಿತ್ರದುರ್ಗ ಜಿಲ್ಲಾ ಶಾಖೆ ಶ್ರವಣ ಸಾಧನ ವಿತರಣಾ ಕಾರ್ಯಕ್ರಮವು ಫೆ. 7ರ ಸಂಜೆ 5.30ಕ್ಕೆ ನಗರದ ಎಸ್.ಆರ್.ಜಿ.ಎಂ.ಎಸ್. ರೋಟರಿ ಬಾಲ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಚಿತ್ರದುರ್ಗ ಜಿಲ್ಲಾ ಶಾಖೆಯ ಕಾರ್ಯದರ್ಶಿಗಳಾದ ಮಜಹರ್ ಉಲ್ಲಾ. ಎನ್ ಹಾಗೂ ಕಾರ್ಯಕಾರಿ ಸಮಿತಿಯ ಸದಸ್ಯರು ತಿಳಿಸಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಅಪರ ಜಿಲ್ಲಾಧಿಕಾರಿಗಳಾದ ಬಿ.ಟಿ. ಕುಮಾರಸ್ವಾಮಿ ನರವೇರಿಸಲಿದ್ದಾರೆ. ಅಧ್ಯಕ್ಷತೆಯನ್ನು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಉಪಾಧ್ಯಕ್ಷರಾದ ಈ. ಅರುಣ್ ಕುಮಾರ್ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಜಕ ನಿರ್ದೇಶಕರಾದ ಬಿ.ವಿ.ತುಕರಾಂ ರಾವ್, ವಿಕಲಚೇತನರ ಹಾಗೂ ಹಿರಿಯನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀಮತಿ. ಜೆ. ವೈಶಾಲಿ, ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ರಾಜ್ಯ ಆಡಳಿತ ಮಂಡಳಿ ಸದಸ್ಯರಾದ ಕೆ.ಮಧುಪ್ರಸಾದ್, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಚಿತ್ರದುರ್ಗ ಶಾಖೆಯ ಖಜಾಂಚಿಗಳಾದ ಎಸ್. ವಿರೇಶ್ ಭಾಗವಹಿಸಲಿದ್ದಾರೆ.

### ಆಕಸ್ಮಿಕ ಬೆಂಕಿ ಹಲವೆಡೆ ಬಣವೆಗಳು ಭಸ್ಮ: ಲಕ್ಷಾಂತರ ರೂ ನಷ್ಟ



» ಚಳ್ಳಕೆರೆ

ಚಳ್ಳಕೆರೆ ಠಾಣಾ ವ್ಯಾಪ್ತಿಯ ಭರಮಸಾಗರ ಗ್ರಾಮದಲ್ಲಿ ಸೋಮಶೇಖರಪ್ಪ ಎಂಬುವವರ ರಿ.ಸರ್ವೆ ನಂ. 63ರ ಎರಡು ಎಕರೆ ಪ್ರದೇಶದಲ್ಲಿದ್ದ ಒಣಹುಲ್ಲಿನ ಬಣವೆಗೆ ಆಕಸ್ಮಿಕ ಬೆಂಕಿ ಬಿದ್ದು ಎರಡೂ ಬಣವೆ ಸುಟ್ಟು ಭಸ್ಮವಾಗಿವೆ. ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದ್ದು ಅಗ್ನಿಶಾಮಕ ಪಡೆಯ ಅಧಿಕಾರಿ ಮುಸ್ತಾಕೀಂ ಮಹಮ್ಮದ್ ಮತ್ತು ತಂಡ ಸ್ಥಳಕ್ಕೆ ಭೇಟಿ ನೀಡಿ ಬೆಂಕಿಯನ್ನು ನಂದಿಸಿದೆ. ತಾಲ್ಲೂಕಿನ ಜಾಜೂರು ಗ್ರಾಮದ ಈ.ಓಬಳೇಶಪ್ಪ ಎಂಬುವವರ ಎರಡು ಎಕರೆ ಜಮೀನಿನಲ್ಲಿದ್ದ ಹುಲ್ಲಿನ ಬಣವೆ ಆಕಸ್ಮಿಕವಾಗಿ ಬಿದ್ದ ಬೆಂಕಿಗೆ ಸಂಪೂರ್ಣ ಸುಟ್ಟು 60 ಸಾವಿರಕ್ಕೂ ಹೆಚ್ಚು ನಷ್ಟ ಸಂಬವಿಸಿದೆ. ತಾಲ್ಲೂಕಿನ ಕೊರ್ಲಕುಂಟೆ ಗ್ರಾಮದ ಬಡಗಡ್ಡೆ ಗೋಮಾಳದ ರೈತ ಉಪ್ಪಾರತಿಪ್ಪೇಸ್ವಾಮಿ ಎಂಬುವವರ ಎರಡು ಎಕರೆ ಪ್ರದೇಶದ ಕಡ್ಲೆಬಳ್ಳಿ ಆಕಸ್ಮಿಕ ಬೆಂಕಿ ಬಿದ್ದು ಸುಟ್ಟುಹೋಗಿ ಸುಮಾರು 2ಲಕ್ಷ ನಷ್ಟ ಸಂಭವಿಸಿದೆ ಎನ್ನಲಾಗಿದೆ. ಅಗ್ನಿಶಾಕಮ ಪಡೆದ ಸ್ಥಳಕ್ಕೆ ತೆರಳಿ ಬೆಂಕಿ ನಂದಿಸಿದೆ.

### ಪುಸ್ತಕ ಮೇಳ

» ಚಿತ್ರದುರ್ಗ

ಕರ್ನಾಟಕ ವಿಧಾನ ಸಭೆ ಸಚಿವಾಲಯದಿಂದ ಪ್ರಥಮ ಬಾರಿಗೆ ನಾಡಿನ ಜನತೆಗೆ ಅತೀ ಅಮೂಲ್ಯವಾದ ಪುಸ್ತಕಗಳನ್ನು ವೀಕ್ಷಿಸಲು ಮತ್ತು ಖರೀದಿಸಲು ಕರ್ನಾಟಕ ವಿಧಾನ ಸಭಾ ಸಚಿವಾಲಯದ ವತಿಯಿಂದ ಫೆಬ್ರವರಿ 27 ರಿಂದ ಮಾರ್ಚ್ 3 ರವರೆಗೆ ವಿಧಾನಸೌಧದ ಆವರಣದಲ್ಲಿ ಪುಸ್ತಕ ಮೇಳ ಹಮ್ಮಿಕೊಳ್ಳಲಾಗಿದೆ. ಈ ಪುಸ್ತಕ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ನಾಡಿನ ಪ್ರಕಾಶಕರು/ ಮಾರಾಟಗರಾರು ನಿಗದಿತ ಅರ್ಜಿ ನಮೂನೆಯನ್ನು ಮುಖ್ಯ ಗ್ರಂಥಪಾಲಕರು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು, ಇವರಿಂದ ಅಥವಾ ವಿಧಾನ ಸಭೆ ಸಚಿವಾಲಯದ ವೆಬ್‌ಸೈಟ್ www.kla.kar.nic.inನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ. ಮೇಳದಲ್ಲಿ ಭಾಗವಹಿಸುವ ಪ್ರಕಾಶಕರು/ಮಾರಾಟಗಾರರು ಮಳಿಗೆಯೊಂದಕ್ಕೆ ರೂ.1,000/–ಗಳ ಭದ್ರತಾ ಠೇವಣಿಡಿ.ಡಿಯನ್ನು,ಕಾರ್ಯದರ್ಶಿಗಳು,ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರ ಹೆಸರಿನಲ್ಲಿ ಸಲ್ಲಿಸುವುದು. ಭರ್ತಿ ಮಾಡಿದ ಅರ್ಜಿಯನ್ನು ಡಿ.ಡಿ.ಯೊಂದಿಗೆ 2025ನೇ ಫೆಬ್ರವರಿ 12 ರಂದು ಸಂಜೆ 5.00 ಗಂಟೆಯೊಳಗೆ ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರಿಗೆ ಸಲ್ಲಿಸಬಹುದು ಎಂದು ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿಗಳಾದ ಎಂ.ಕೆ.ವಿಶಾಲಾಕ್ಷಿ ಅವರು ತಿಳಿಸಿದ್ದಾರೆ.

### ಪ್ರಗತಿ ಪರಿಶೀಲನಾ ಸಭೆಯಲ್ಲಿ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ

# ಬಾಲ್ಯ ವಿವಾಹ ತೊಲಗಿಸಲು ಬಡತನ ನಿರ್ಮೂಲನೆ ಅತ್ಯಗತ್ಯ: ಡಾ.ನಾಗಲಕ್ಷ್ಮೀ

» ಚಿತ್ರದುರ್ಗ



ಜಿಲ್ಲೆಯಲ್ಲಿ ಬಾಲ್ಯವಿವಾಹ ಪ್ರಕರಣಗಳ ಸಂಖ್ಯೆ ಹೆಚ್ಚಾಗಿದ್ದು, ಬಾಲ್ಯವಿವಾಹಕ್ಕೆ ಬಡತನವೇ ಪ್ರಮುಖ ಕಾರಣ. ಹಾಗಾಗಿ ಸರ್ಕಾರದ ಯೋಜನೆ, ಸೌಲಭ್ಯಗಳನ್ನು ಜನರಿಗೆ ಸಮರ್ಪಕವಾಗಿ ತಲುಪಿಸಿದರೆ ಬಡತನ ನಿರ್ಮೂಲನೆಯ ಜೊತೆಗೆ ಬಾಲ್ಯವಿವಾಹ ಪದ್ಧತಿ ಕೂಡ ತೊಲಗಲು ಸಾಧ್ಯವಾಗಲಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಮಹಿಳಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಇದಕ್ಕೆ ಬಡತನ ಮುಖ್ಯ ಕಾರಣವೆಂಬುದು ತಿಳಿದುಬಂದಿದೆ. ಹೀಗಾಗಿ ಸರ್ಕಾರದ ಯೋಜನೆಗಳು, ಸೌಲಭ್ಯಗಳನ್ನು, ಗ್ರಾಮಾಭಿವೃದ್ಧಿ ಯೋಜನೆಗಳನ್ನು ವ್ಯವಸ್ಥಿತ ರೀತಿಯಲ್ಲಿ ಸಮಾಜದ ಎಲ್ಲ ಅರ್ಹರಿಗೆ ಸಮರ್ಪಕವಾಗಿ ತಲುಪಿಸಿದರೆ ಬಡತನ ನಿರ್ಮೂಲನೆಯಾಗಲಿದೆ. ಇದರಿಂದ ಬಾಲ್ಯವಿವಾಹವೂ ಕಡಿಮೆಯಾಗಲಿದೆ ಎಂದು ಹೇಳಿದರು.

ಮಹಿಳೆಯು ಪೊಲೀಸ್ ಠಾಣೆಗೆ ದೂರು ಕೊಡಲು ಬಂದಾಗ ತಕ್ಷಣ ಸ್ಪಂದಿಸುವುದು ಬಹಳ ಮುಖ್ಯ. ಹೆಣ್ಣು ಮಕ್ಕಳು ಪೊಲೀಸ್ ಠಾಣೆಗೆ ಬಂದಾಗ ಮಹಿಳಾ ಸ್ನೇಹಿ ವಾತಾವರಣ ಇರಬೇಕು ಎಂದು ತಿಳಿಸಿದ ಅವರು, ಮಹಿಳಾ ಸ್ನೇಹಿ ಪೊಲೀಸ್‌ಗೆ ಕರ್ನಾಟಕ ಪೊಲೀಸ್ ದೇಶದಲ್ಲಿಯೇ ನಂ.1 ಸ್ಥಾನದಲ್ಲಿದೆ ಎಂದರು.

ಸಾಮಾನ್ಯ ಜನರಿಗೆ ಅರಿವು ಮೂಡಿಸಿ: ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಮೇಲಿನ ದೌರ್ಜನ್ಯ ತಡೆಯುವ ನಿಟ್ಟಿನಲ್ಲಿ ಸಾಮಾನ್ಯ ಜನರಿಗೆ ಹೆಚ್ಚಿನ ಅರಿವು ಮೂಡಿಸಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಹೇಳಿದರು.

ಪರಿಶಿಷ್ಟ ಜಾತಿ ಹಾಗೂ ಪಂಗಡದವರ ಮೇಲಿನ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ಪ್ರತಿ ಮೂರು ತಿಂಗಳಿಗೊಮ್ಮೆ ಜಿಲ್ಲಾ ಜಾಗೃತಿ ಹಾಗೂ ಉಸ್ತುವಾರಿ ಸಮಿತಿ ಸಭೆ ನಡೆಸಲಾಗುತ್ತಿದೆ. ದೌರ್ಜನ್ಯ ಪ್ರಕರಣ ನಡೆದ ಪ್ರದೇಶಗಳನ್ನು ಗುರುತಿಸಿ, ನಿರಂತರವಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ಚಿಕ್ಕಪುರ ಗೊಲ್ಲರಹಟ್ಟಿ ಕಂದಾಯ ಗ್ರಾಮ ಮಾಡಿ: ಚಿತ್ರದುರ್ಗ ತಾಲ್ಲೂಕಿನ ಚಿಕ್ಕಪುರ ಗೊಲ್ಲರಹಟ್ಟಿ ಮೂಲಸೌಲಭ್ಯಗಳಿಂದ ವಂಚಿತವಾಗಿದ್ದು, ಚಿಕ್ಕಪುರ ಗೊಲ್ಲರಹಟ್ಟಿಯನ್ನು ಕಂದಾಯ ಗ್ರಾಮವನ್ನಾಗಿ ಮಾಡಿ, ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಂತೆ ಮಹಿಳಾ ಆಯೋಗದ ಅಧ್ಯಕ್ಷರು ಅಧಿಕಾರಿಗಳಿಗೆ ಸೂಚಿಸಿದರು.

ಚಿಕ್ಕಪುರ ಗೊಲ್ಲರಹಟ್ಟಿ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ನಾಲ್ಕೈದು ಗ್ರಾಮಗಳಿಗೆ ಬಸ್ ಸೌಲಭ್ಯದ ಕೊರತೆ ಇದ್ದು, ಹೆಣ್ಣು ಮಕ್ಕಳ ಹಿತದೃಷ್ಟಿಯಿಂದ ಕೂಡಲೇ ಬಸ್ ಕಾರ್ಯಾಚರಣೆಗೆ ಕ್ರಮವಹಿಸಬೇಕು. ಉದ್ಯೋಗ ಖಾತ್ರಿ ಯೋಜನೆಯಡಿ ಅರ್ಹರಿಗೆ ಕೂಲಿ ಕೆಲಸ ನೀಡಬೇಕು. ಗ್ರಾಮದಲ್ಲಿಯೇ ಪಡಿತರ ವಿತರಣೆಯಾಗಬೇಕು. ಗ್ರಾಮದಲ್ಲಿ ಒಮ್ಮೆ ವಿದ್ಯುತ್ ಹೋದರೆ, ಐದಾರು ದಿನ ವಿದ್ಯುತ್ ಸಂಪರ್ಕ ಪುನರ್ ಸ್ಥಾಪನೆ ಆಗುವುದಿಲ್ಲ, ವಿದ್ಯುತ್ ಸಮಸ್ಯೆಯಾದರೂ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸುತ್ತಿಲ್ಲ, ಅಲ್ಲದೆ ದೂರವಾಣಿ ಕರೆ ಮಾಡಿದರೂ ಉತ್ತರಿಸುತ್ತಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದ್ದು, ವಿದ್ಯುತ್ ಸಮಸ್ಯೆಯಾಗದಂತೆ ಸೂಕ್ತ ಕ್ರಮವಹಿಸಬೇಕು, ಸಾರ್ವಜನಿಕರ ದೂರಿಗೆ ಸ್ಪಂದಿಸದ ಅಧಿಕಾರಿ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು. ಗ್ರಾಮೀಣ ಅಭಿವೃದ್ಧಿಯಲ್ಲಿ ಪಂಚಾಯಿತಿ ಅಭಿವೃದ್ಧಿಗಳ ಪಾತ್ರ ಬಹಳ ಮುಖ್ಯವಾಗಿದ್ದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಇಚ್ಛಾಶಕ್ತಿ ಇದ್ದರೆ ಗ್ರಾಮಗಳು ಅಭಿವೃದ್ಧಿಯಾಗಲಿದೆ. ಹಾಗಾಗಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಇಚ್ಛಾಶಕ್ತಿಯಿಂದ ಕಾರ್ಯನಿರ್ವಹಿಸಬೇಕು. ಈ ನಿಟ್ಟಿನಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪಂಚಾಯಿತಿ ಅಭಿವೃದ್ಧಿಗಳಿಗೆ ಅಗತ್ಯ ಸಲಹೆ–ಸೂಚನೆ, ಪ್ರಗತಿ ಪರಿಶೀಲನೆ ನಡೆಸುವ ಮೂಲಕ ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ತಲುಪಿಸಬೇಕು ಎಂದು ಹೇಳಿದರು.

ಗೊಲ್ಲರಹಟ್ಟಿಗಳಲ್ಲಿ ಮೌಢ್ಯ ಪದ್ಧತಿ, ಸಂಪ್ರದಾಯಗಳು ಕಡಿಮೆಯಾಗುತ್ತಾ ಬಂದಿವೆ. ಜಿಲ್ಲೆಯಲ್ಲಿ ಸುಮಾರು 300 ಗೊಲ್ಲರಹಟ್ಟಿಗಳಿದ್ದು, ಈ ಗೊಲ್ಲರಹಟ್ಟಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಕ್ರಮವಹಿಸಿದ್ದು, ಗ್ರಾಮಗಳ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಡಾ.ಸುಬ್ರಾನಾಯಕ್ ಮಾತನಾಡಿ, ಗೊಲ್ಲರಹಟ್ಟಿಗಳಿಗೆ ರಸ್ತೆ, ಚರಂಡಿ, ನಿವೇಶನ ಸೇರಿದಂತೆ ಅಗತ್ಯ ಮೂಲಸೌಲಭ್ಯಗಳ ಕಲ್ಪಿಸಲು ಈಗಾಗಲೇ ತಾಲ್ಲೂಕು ಮಟ್ಟದ ಅಧಿಕಾರಿಗಳು ಸಮೀಕ್ಷೆ ಕಾರ್ಯ ನಡೆಸುತ್ತಿದ್ದು, ಮಾಹಿತಿ ಪಡೆಯಲಾಗುತ್ತಿದೆ ಎಂದು ಸಭೆಗೆ ಮಾಹಿತಿ ನೀಡಿದರು.

**ಜಿಲ್ಲಾಸ್ಪತ್ರೆ ಕಾರ್ಯವೈಖರಿಗೆ ಬೇಸರ:** ಜಿಲ್ಲಾಸ್ಪತ್ರೆಯ ಕಾರ್ಯವೈಖರಿಗೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಬೇಸರ ವ್ಯಕ್ತಪಡಿಸಿದರು.

ಜಿಲ್ಲಾಸ್ಪತ್ರೆಯ ಸ್ಥಿತಿಗತಿ ಅವಲೋಕನಕ್ಕಾಗಿ ಭೇಟಿ ನೀಡಿದಾಗ ಸಾಕಷ್ಟು ದೂರುಗಳು ಗಮನಕ್ಕೆ ಬಂದಿದ್ದು, ಜಿಲ್ಲಾಸ್ಪತ್ರೆಯ ವ್ಯವಸ್ಥೆಯು ಮನಸ್ಸಿಗೆ ನೋವುಂಟು ಮಾಡಿದೆ. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ. ಬಿಸಿ ನೀರು ಇಲ್ಲ, ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಅಳವಡಿಸಿರುವ ಲಿಫ್ಟ್ ವರ್ಕ್ ಆಗುತ್ತಿಲ್ಲ. ಜಿಲ್ಲಾಸ್ಪತ್ರೆಯಿಂದ ನಡೆಯುತ್ತಿರುವ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳಿಗೆ ಅಗತ್ಯ ಸೌಲಭ್ಯಗಳು ಕಲ್ಪಿಸದೇ ಇರುವುದಕ್ಕೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಅವರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ನರ್ಸಿಂಗ್ ವಿದ್ಯಾರ್ಥಿಗಳನ್ನು ಸಭೆಗೆ ಕರೆಯಿಸಿದ ಆಯೋಗದ ಅಧ್ಯಕ್ಷರು, ಅವರಿಂದ ಅಹವಾಲುಗಳನ್ನು ಆಲಿಸಿದರು, ನರ್ಸಿಂಗ್ ಕಾಲೇಜಿಗೆ ಕೇವಲ 2 ಕೊಠಡಿ ಕೊಡಲಾಗಿದೆ, ಸೂಕ್ತ ಬೋಧಕರಿಂದ ಬೋಧನೆ ನಮಗೆ ದೊರೆಯುತ್ತಿಲ್ಲ, ಮೂಲಭೂತ ಸೌಕರ್ಯ ಸಿಗುತ್ತಿಲ್ಲ, ವಿದ್ಯಾರ್ಥಿಗಳಿಗೆ ಬೆದರಿಕೆ ಹಾಕಲಾಗುತ್ತಿದೆ ಎಂದು ದೂರಿದರು. ಈ ಬಗ್ಗೆ ಖುದ್ದಾಗಿ ಭೇಟಿ ನೀಡಿ, ಸಮಸ್ಯೆ ಪರಿಹರಿಸುವುದಾಗಿ ಜಿಲ್ಲಾಧಿಕಾರಿಗಳು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

**ಸಾಮಾಜಿಕ ಜಾಲತಾಣದ ದುಷ್ಪರಿಣಾಮಗಳ ಬಗ್ಗೆ ಎಚ್ಚರವಿರಲಿ :** ಗ್ರಾಮೀಣ ಭಾಗದಿಂದ ನಗರ, ಪಟ್ಟಣಗಳಿಗೆ ಓದಲು ಬರುವ ಹೆಣ್ಣುಮಕ್ಕಳು ಸಾಮಾಜಿಕ ಜಾಲತಾಣದಲ್ಲಿ ಸಕ್ರಿಯರಾಗಿ, ಮೋಸದ ಬಲೆಗೆ ಬೀಳುವ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಹದಿಹರೆಯದ ಹೆಣ್ಣು ಮಕ್ಕಳು, ಸಾಮಾಜಿಕ ಜಾಲತಾಣದ ಬಳಕೆಯಲ್ಲಿ ಸಾಕಷ್ಟು ಎಚ್ಚರ ವಹಿಸಬೇಕು. ಆಸೆ, ಆಮಿಷಗಳಿಗೆ ಒಳಗಾಗಿ, ಮೋಸ ಹೋಗುವಂತಾಗಬಾರದು. ಹೆಣ್ಣು ಮಕ್ಕಳು ತಮ್ಮ ಪೋಷಕರು, ಪಾಲಕರೊಂದಿಗೆ ನಿರಂತರ ಸಂಪರ್ಕವನ್ನು ಇಟ್ಟುಕೊಳ್ಳಬೇಕು. ಯಾವುದೇ ಮೋಸ, ವಂಚನೆ ಅಥವಾ ಬೆದರಿಕೆಯಂತಹ ಪರಿಸ್ಥಿತಿ ಕಂಡುಬಂದಾಗ ಧೈರ್ಯವಾಗಿ ಎದುರಿಸಬೇಕು. ಪೊಲೀಸ್ ಇಲಾಖೆ ಕೂಡ ಈ ಬಗ್ಗೆ ಹೆಚ್ಚಿನ ನಿಗಾ ವಹಿಸಿ, ಹೆಣ್ಣು ಮಕ್ಕಳ ರಕ್ಷಣೆಗೆ ಮುಂದಾಗಬೇಕು ಎಂದು ಡಾ. ನಾಗಲಕ್ಷ್ಮಿ ಅವರು ಹೇಳಿದರು.

**ಮಹಿಳಾ ಆಯೋಗಕ್ಕೆ 2 ಸಾವಿರ ಅರ್ಜಿ ಸ್ವೀಕಾರ:** ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಕಳೆದ ಒಂದು ವರ್ಷದ ಅವಧಿಯಲ್ಲಿ ಸುಮಾರು 2 ಸಾವಿರ ಅರ್ಜಿಗಳು ಆಯೋಗಕ್ಕೆ ಬಂದಿವೆ. ಈ ಪೈಕಿ ಈಗಾಗಲೇ 1,700 ಕ್ಕೂ ಹೆಚ್ಚು ಅರ್ಜಿಗಳನ್ನು ಇತ್ಯರ್ಥ ಮಾಡಲಾಗಿದ್ದು, ಇನ್ನೂ 200 ಅರ್ಜಿಗಳು ಮಾತ್ರ ಬಾಕಿ ಇವೆ ಎಂದು ಹೇಳಿದರು.

ಮಕ್ಕಳ ರಕ್ಷಣೆ, ಭದ್ರತೆ, ಸ್ಥಿತಿಗತಿಗಳ ಪರಿಶೀಲನೆ ನಡೆಸಿ, ಸಂಬಂಧಪಟ್ಟ ಅಧಿಕಾರಿಗಳು ಪ್ರತಿ ತಿಂಗಳಿಗೊಮ್ಮೆ ವರದಿ ನೀಡಬೇಕು ಎಂದು ತಿಳಿಸಿದ ಅವರು, ಬಾಲ್ಯವಿವಾಹ ಹಾಗೂ ದೌರ್ಜನ್ಯ ತಡೆಗೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಹಾಗೂ ಪೊಲೀಸ್ ತುರ್ತು ಸಹಾಯವಾಣಿ ಸಂಖ್ಯೆ 112 ಗೆ ಕರೆ ಮಾಡುವಂತೆ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಇದೇ ಸಂದರ್ಭದಲ್ಲಿ ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಆರ್.ಶಿವಣ್ಣ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ. ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸೇರಿದಂತೆ ವಿವಿಧ ಇಲಾಖೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

## ಪ್ರಮುಖ ಸುದ್ದಿ

### ಸಮಾಜದ ಪ್ರತಿಯೊಬ್ಬ ವ್ಯಕ್ತಿಯೂ ಶಿಕ್ಷಣವಂತನಾಗಲು ಕಾನೂನು ನೆರವು : ನ್ಯಾ. ಸಮೀರ್‌ಪಿ.ನಂದ್ಯಾಲ

# ದೇಶದ ಸರ್ವತೋಮುಖ ಅಭಿವೃದ್ದಿ ಶಿಕ್ಷಣದಿಂದ ಮಾತ್ರ ಸಾಧ್ಯ

» ಚಳ್ಳಕೆರೆ



ಮಹಾತ್ಮಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸು ಮಾಡಲು ನಾವೆಲ್ಲರೂ ಶಿಕ್ಷಣವಂತರಾದರೆ ಮಾತ್ರ ಸಾಧ್ಯ. ಶಿಕ್ಷಣ ಪಡೆಯುವುದು ಪ್ರತಿಯೊಬ್ಬ ನಾಗರೀಕರ ಮೂಲಭೂತಹಕ್ಕು. ಶಿಕ್ಷಣವಿಲ್ಲದ ನಮ್ಮೆಲ್ಲರ ಸಾಧನೆ ಶೂನ್ಯವಾಗುತ್ತದೆ, ದೇಶದ ಅಭಿವೃದ್ದಿಗೆ ಶಿಕ್ಷಣವೇ ತಳಹದಿ. ಈ ದೇಶದ ಕಾನೂನು ಪ್ರತಿಯೊಬ್ಬ ವ್ಯಕ್ತಿಗೂ ಶಿಕ್ಷಣ ಕಲಿಯುವ ಅವಕಾಶ ಮಾಡಿಕೊಟ್ಟಿದೆ, ನಾವೆಲ್ಲರೂ ಕಾನೂನನ್ನು ಗೌರವಿಸಬೇಕೆಂದು ಸಿವಿಲ್ ನ್ಯಾಯಾಲಯದ ಹಿರಿಯ ನ್ಯಾಯಾಧೀಶ ಸಮೀರ್‌ಪಿ.ನಂದ್ಯಾಲ್ ತಿಳಿಸಿದರು.

ಅವರು, ತಾಲ್ಲೂಕಿನ ನಗರಂಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಿದ್ದಾಪುರ ಗ್ರಾಮದ ಶಾರಾದಾಂಬ ಗ್ರಾಮಾಂತರ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಕಾನೂನು ಜಾಗೃತಿ ಶಿಬಿರವನ್ನು ದೀಪಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ತಾಲ್ಲೂಕು ಕಾನೂನು ಸೇವಾಸಮಿತಿ, ಜಿಲ್ಲಾ, ತಾಲ್ಲೂಕು ಪಂಚಾಯಿತಿ, ಸಮಾಜ ಕಲ್ಯಾಣ, ಶಿಕ್ಷಣ ಇಲಾಖೆ ಮತ್ತು ಸಮಾಜ ಪರಿವರ್ತನಾ ಸೇವಾ ಸಂಸ್ಥೆ ಕಾರ್ಯಕ್ರಮವನ್ನು ಆಯೋಜಿಸಿದ್ದವು. ಇತ್ತೀಚಿನ ವರ್ಷಗಳಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಅಭೂತಪೂರ್ವಸಾಧನೆ ಮಾಡುವತ್ತ ನಾವೆಲ್ಲರೂ ಯಶಸ್ವಿ ಹೆಜ್ಜೆಇಟ್ಟಿದ್ದೇವೆ. ಗ್ರಾಮೀಣ ಭಾಗದಲ್ಲಿ ಮಕ್ಕಳನ್ನು ಶಾಲೆಗೆ ಕಳಿಸದೆ ಕೂಲಿಕೆಲಸಕ್ಕೆ ಕಳಿಸುವ ಪದ್ದತಿ ನಿರ್ಮೂಲನಕ್ಕೆ ಸಾರ್ವಜನಿಕರು ಕಾನೂನಿನೊಂದಿಗೆ ಕೈಜೋಡಿಸಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಸಮಾಜಪರಿವರ್ತನಾ ಸಮಿತಿ ಅಧ್ಯಕ್ಷ ಮರಿಸ್ವಾಮಿ, ಜಿಲ್ಲಾದ್ಯಂತ ಈ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಜನರು ಶಿಕ್ಷಣ ಕಲಿಕೆಯಲ್ಲಿ ಆಸಕ್ತಿ ಹುಟ್ಟುವಂತೆ ಮಾಡಲಾಗುತ್ತದೆ. ವಿಶೇಷವಾಗಿ ನ್ಯಾಯಾಂಗ ಇಲಾಖೆಯೂ ಸೇರಿದಂತೆ ವಿವಿಧ ಇಲಾಖೆ ಈ ಕಾರ್ಯಕ್ಕೆ ಮುಕ್ತಕಂಠದಿಂದ ಸಹಕಾರ ನೀಡುತ್ತಿವೆ. ಶಿಕ್ಷಣದಿಂದ ಮಾತ್ರ ಪರಿವರ್ತನೆ ಸಾಧ್ಯ ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾತನಾಡಿ, ಶಿಕ್ಷಣ ಕ್ಷೇತ್ರ ಇತ್ತೀಚಿನ ದಿನಗಳಲ್ಲಿ ಗಣಕೀಕೃತವಾಗಿ ಹೊರಹೊಮ್ಮಿದ್ದು, ಶಿಕ್ಷಣ ಕಲಿಯಲು ಆಸಕ್ತಿ ಮೂಡುತ್ತಿದೆ. ಸರ್ಕಾರ ಗ್ರಾಮೀಣ ಭಾಗದ ಶಾಲೆಗಳಲ್ಲೂ ಸಹ ಸ್ಮಾರ್ಟ್‌ಕ್ಲಾಸ್ ನಡೆಸುವ ಮೂಲಕ ವಿದ್ಯಾರ್ಥಿಗಳನ್ನು ಶೈಕ್ಷಣಿಕ ಪ್ರಗತಿಗೆ ಪ್ರೇರೇಪಿಸುತ್ತಿದೆ ಎಂದರು. ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ನಮ್ಮ ದೇಶದ ಕಾನೂನು ನಮ್ಮೆಲ್ಲರಿಗೂ ಸಮಾನರೀತಿಯ ಹಕ್ಕು, ಕರ್ತವ್ಯಗಳ ಬಗ್ಗೆ ಜಾಗೃತಿ ಮೂಡಿಸಿದೆ. ದೇಶದ ಸಂಪೂರ್ಣ ಆಡಳಿತ ಸಂವಿಧಾನಾತ್ಮಕವಾಗಿ ನಡೆದರೂ ಅದಕ್ಕೆ ಕಾನೂನಿನ ನೆರವು ಮುಖ್ಯವೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಗಳಮ್ಮರಂಗಸ್ವಾಮಿ, ಗೌರವಾನ್ವಿತ ನ್ಯಾಯಾಂಗ ಇಲಾಖೆಯೂ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ನಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಂತಸ ತಂದಿದೆ. ನಮ್ಮ ಸಮಾಜದಲ್ಲಿ ಗುರುಕುಲಪದ್ದತಿಯಿಂದ ಶಿಕ್ಷಣ ಆರಂಭವಾಗಿದ್ದು, ಇಂದಿಗೂ ಶಿಕ್ಷಣ ಕ್ಷೇತ್ರದ ಮೌಲ್ಯ ಕುಸಿದಿಲ್ಲ, ನಾವೆಲ್ಲರೂ ಶಿಕ್ಷಣ ಪ್ರೇಮಿಗಳಾಗಬೇಕು, ಶಿಕ್ಷಣ ಕಲಿಕೆ ನಮ್ಮೆಲ್ಲರ ಜವಾಬ್ದಾರಿ ಎಂದರು.

ಕಾರ್ಯಕ್ರಮದಲ್ಲಿ ಸಮಾಜಪರಿವರ್ತನಾ ಸಮಿತಿ ತಾಲ್ಲೂಕು ಅಧ್ಯಕ್ಷ ರಾಮರೆಡ್ಡಿ, ಎಇಒ ಸಂತೋಷ್, ಸಂಪತ್‌ಕುಮಾರ್, ವಕೀಲರ ಸಂಘದ ಉಪಾಧ್ಯಕ್ಷ ಬಿ.ಪಾಲಯ್ಯ, ಪ್ರಧಾನ ಕಾರ್ಯದರ್ಶಿ ಎಂ.ಸಿದ್ದರಾಜು, ಪ್ರಭಾರಪಿಡಿಒ ಮಲ್ಲೇಶಪ್ಪ, ಸಮಾಜಕಲ್ಯಾಣ ಇಲಾಖೆ ಮಹಾಲಿಂಗಪ್ಪ, ಆಲಿಜಾನ್, ಆರ್.ಮಲ್ಲೇಶಪ್ಪ, ಗ್ರಾಮಪಂಚಾಯಿತಿ ಸದಸ್ಯ ಅಂಗಡಿರಮೇಶ್, ಲೆಕ್ಕಾಧಿಕಾರಿ ಮಂಜುಳಾ, ಕಾರ್ಯದರ್ಶಿ ತಿಪ್ಪೇರುದ್ರಪ್ಪ ಮುಂತಾದವರು ಉಪಸ್ಥಿತರಿದ್ದರು. ಪ್ರಾರಂಭದಲ್ಲಿ ತಾಲ್ಲೂಕು ಸಂಯೋಜಕ ಕೆ.ನಾಗರಾಜು ಸ್ವಾಗತಿಸಿ, ವಂದಿಸಿದರು.

# ದಾಳಿಂಬೆಯಲ್ಲಿ ನೀರಿನ ಸಮರ್ಪಕ ಹಾಗೂ ಸಮಗ್ರ ಬೆಳೆ ನಿರ್ವಹಣೆಯಿಂದ ಉತ್ತಮ ಗುಣಮಟ್ಟದ ಇಳುವರಿ ಸಾಧ್ಯ

## ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ರೈತರಿಗೆ ತರಬೇತಿಯಲ್ಲ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ರಜನೀಕಾಂತ

» **ಚಿತ್ರದುರ್ಗ**

ದಾಳಿಂಬೆಯು ನಮ್ಮ ಜಿಲ್ಲೆಯ ಪ್ರಮುಖ ಹಣ್ಣಿನ ಬೆಳೆಯಲ್ಲಿ ಒಂದಾಗಿದ್ದು, ಬೆಳೆಯಲ್ಲಿ ಸಮರ್ಪಕ ನೀರಿನ ನಿರ್ವಹಣೆ, ಸುಸಜ್ಜಿತ ಉತ್ಪಾದನೆ ತಾಂತ್ರಿಕತೆಗಳು ಮತ್ತು ಸಮಗ್ರ ಪೀಡೆ ನಿರ್ವಹಣೆಯ ಪದ್ಧತಿ ಅಳವಡಿಕೆಯಿಂದ ಉತ್ತಮ ಇಳುವರಿ ಪಡೆಯಲು ಸಾಧ್ಯವಿದೆ ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ರಜನೀಕಾಂತ ತಿಳಿಸಿದರು.

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಬುಧವಾರ ಜಿಲ್ಲೆಯ ವಿವಿಧ ಗ್ರಾಮಗಳಿಂದ ಆಗಮಿಸಿದ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಕೃಷಿಯಲ್ಲಿ ವೈಜ್ಞಾನಿಕ ತುಂತುರು ಮತ್ತು ಹನಿ ನೀರಾವರಿ ಘಟಕಗಳ ಅಳವಡಿಕೆ ಮತ್ತು ನಿರ್ವಹಣೆ, ದಾಳಿಂಬೆ ಬೆಳೆಯ ಸುಸಜ್ಜಿತ ಉತ್ಪಾದನೆ ಕ್ರಮಗಳು, ನೀರಿನ ನಿರ್ವಹಣೆ, ಸಮಗ್ರರೋಗ ಮತ್ತು ಕೀಟಗಳ ನಿರ್ವಹಣೆ ಕುರಿತು ಆಯೋಜಿಸಲಾದ ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭೂಮಿಯ ಮೇಲೆ ಶೇ 70 ರಷ್ಟು ನೀರಿದ್ದರೂ ಶೇ 2% ಮಾತ್ರ ಕೃಷಿ, ಕೈಗಾರಿಕೆ ಮತ್ತು ದಿನ ನಿತ್ಯ ಬಳಕೆಗೆ ಯೋಗ್ಯವಾಗಿದ್ದು ವೈಜ್ಞಾನಿಕವಾಗಿ ಈ ಶುದ್ಧ ನೀರಿನ ಮಿತ ಹಾಗೂ ಸಮರ್ಥ ಬಳಕೆ ತಮ್ಮೆಲ್ಲರ ಜವಬ್ದಾರಿಯಾಗಿದೆಂದರು.

ತುಂತುರು ಮತ್ತು ಹನಿ ನೀರಾವರಿ ಪದ್ಧತಿಗಳ ಅಳವಡಿಕೆಯಿಂದ ಕೃಷಿಯಲ್ಲಿ



30-40% ನೀರಿನ ಉಳಿತಾಯ, ವಿದ್ಯುಚ್ಛಕ್ತಿಯ ಉಳಿತಾಯ, ಕೂಲಿ ಆಳುಗಳ ಉಳಿತಾಯ, ಸಮಯದ ಉಳಿತಾಯ, ಕಳೆಗಳ ನಿರ್ವಹಣೆ ಮತ್ತು ರೋಗಗಳ ಹರಡುವಿಕೆಯನ್ನು ತಡೆಗಟ್ಟಬಹುದು. ಹನಿ ನೀರಾವರಿ ಪದ್ಧತಿಯಲ್ಲಿ ರಸಾವರಿ ಬಳಸಿ ರಸಗೊಬ್ಬರ ನೀಡುವುದರಿಂದ ರಸಗೊಬ್ಬರದ ಸಮರ್ಪಕ ಬಳಕೆಯಿಂದ ವ್ಯವಯಸಾಯದ ಖರ್ಚು ಕಡಿಮೆಯಾಗಿ 20-30% ಹೆಚ್ಚಿನ ಇಳುವರಿ ಪಡೆಯಲು ಸಾಧ್ಯವೆಂದರು.

ಮಳೆಯಾಶ್ರಿತ ಪ್ರದೇಶದಲ್ಲಿ ರೈತರು ಬಿದ್ದ ನೀರನ್ನು ಇಂಗಿಸಲು ಕಂದಕ ಬದುಗಳ ನಿರ್ಮಾಣ ಮಾಡಬೇಕು ಮತ್ತು ಕೃಷಿ ಹೊಂಡದಲ್ಲಿ ನೀರು ಸಂಗ್ರಹಣೆ ಮಾಡಿ ಬೆಳೆಯ ಸಂದಿಗ್ಧ ಹಂತದಲ್ಲಿ ನೀರು ಹಾಯಿಸಲು ಅನೂಕೂಲವಾಗುತ್ತದೆ. ಕೃಷಿ ಇಲಾಖೆಯಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿಎಲ್ಲಾ ವರ್ಗದ ರೈತರಿಗೆ ಶೇ.90 ಸಹಾಯಧನದಲ್ಲಿ ಸ್ಪ್ರಿಂಕ್ಲರ್‌ಸೆಟ್ ಪಡೆಯಲು ಸಂಬಂಧಪಟ್ಟ ರೈತಸಂಪರ್ಕ ಕೇಂದ್ರಗಳಲ್ಲಿ ಅರ್ಜಿಯನ್ನು ಸಲ್ಲಿಸಿ ಈ ಯೋಜನೆಯ ಅನುಕೂಲ ಪಡೆದು ಕೊಳ್ಳಬಹುದೆಂದರು.

ಬಬ್ಬೂರಿನ ತೋಟಗಾರಿಕೆ ಕಾಲೇಜಿನ ಸಹಾಯಕ ಪ್ರಾಧ್ಯಪಕರಾದ ಡಾ. ಶ್ರೀಧರ್ ಅವರು ದಾಳಿಂಬೆ ಬೆಳೆಯಲ್ಲಿ ಅನುಸರಿಸಬೇಕಾದ ಸುಸಜ್ಜಿತ ಉತ್ಪಾದನೆ ಕ್ರಮಗಳ ಕುರಿತು ಮಾಹಿತಿ ನೀಡಿ, ವೈಜ್ಞಾನಿಕ ನೀರಿನ ಸಮರ್ಪಕ ಹಾಗೂ ಸಮಗ್ರ ಬೆಳೆ ನಿರ್ವಹಣೆಯಿಂದ ಉತ್ತಮ ಗುಣಮಟ್ಟದ ಇಳುವರಿ ಪಡೆಯಲು ಸಾಧ್ಯವೆಂದರು.

ಕೀಟ ಶಾಸ್ತ್ರಜ್ಞರಾದ ಡಾತಾರಣಿಅವರು ದಾಳಿಂಬೆ ಬೆಳೆಯಲ್ಲಿ ಕೀಟಗಳ ನಿರ್ವಹಣೆ ಕುರಿತು ವಿಷಯ ಮಂಡನೆ ಮಾಡಿದರು. ಮುನಿರಬಾದ್‌ನ ತೋಟಗಾರಿಕೆ ಕಾಲೇಜಿನ ರೋಗಶಾಸ್ತ್ರಜ್ಞರಾದ ಡಾ, ರಾಘವೇಂದ್ರ ಆಚಾರಿ ಅವರು ಈ ಬೆಳೆಯಲ್ಲಿ ಬರುವ ರೋಗಗಳ ಸಮಗ್ರ ನಿರ್ವಹಣೆ ಕುರಿತು ಗೂಗಲ್ ಮೀಟ್ ಮೂಲಕ ವಿಷಯ ಮಂಡನೆ ಮಾಡಿದರು.

ಜೈನ್ ಇರಿಗೇಷನ್ ಸಂಸ್ಥೆಯ ಪ್ರತಿನಿಧಿಯಾದ ಕೆ.ದೇವರಾಜ್ ಅವರು ಹನಿ ನೀರಾವರಿ ಘಟಕಗಳನ್ನು ಕ್ಷೇತ್ರ ಮಟ್ಟದಲ್ಲಿ ಅಳವಡಿಸುವ ವಿನ್ಯಾಸ ಹಾಗೂ ನಿರ್ವಹಣೆಯ ವಿಧಾನವನ್ನುತಿಳಿಸಿದರು. ಹನಿ ನೀರಾವರಿ ಪದ್ಧತಿಯಲ್ಲಿ ವಿವಿಧ ಫಿಲ್ಟರ್‌ಗಳ ನಿರ್ವಹಣೆ ಬಗ್ಗೆ ಮಾಹತಿ ನೀಡಿ, ದೈನಂದಿನ ಫಿಲ್ಟರ್‌ಗಳಲ್ಲಿ ಡ್ರೈನ್ ಕವಾಟಗಳನ್ನು ತೆರೆಯುವುದು, ವಾರಕ್ಕೊಮ್ಮೆಮೆಶ್ ಮತ್ತುಡಿಶ್ ಫಿಲ್ಟರ್ ಗಾಗಿ ಫಿಲ್ಟರ್ ಎಲಿಮೆಂಟ್ ತೆರೆಯುವಿಕೆಹಾಗೂ ತಿಂಗಳಿಗೊಮ್ಮೆ ಹೈಡ್ರೋಸೈಕ್ಲೋನ್ ಫಿಲ್ಟರ್‌ನ ಸಂಗ್ರಹಕೊಠಡಿಯಲ್ಲಿ ಸೈಡ್‌ಕ್ಯಾಪ್ ತೆರೆಯುವುದು ಬಹಳ ಮುಖ್ಯವೆಂದರು. ಎಲ್ಲಾ ಡ್ರಿಪ್ ಲ್ಯಾಟರಲ್‌ಗಳ ಫ್ಲಶಿಂಗ್‌ನ್ನು ಪ್ರತಿ15 ದಿನಗಳಿಗೊಮ್ಮೆ ಮಾಡಬೇಕು. ಹನಿ ನೀರಾವರಿಘಟಕದ ನಿರ್ದಿಷ್ಟಅವಧಿಯಕಾರ್ಯಾಚರಣೆಯ ನಂತರಉಪ್ಪು ಶೇಖರಣೆ ಸಂಭವಿಸುತ್ತದೆ. ಸಾಧನದ ಹೊರಮೇಲ್ಮೈಯಲ್ಲಿಉಪ್ಪು ಶೇಖರಣೆಯನ್ನು ನಾವುಗಮನಿಸಿದಾಗ ಆಮ್ಲಚಿಕಿತ್ಸೆಯನ್ನು ಮಾಡಬೇಕಾಗುತ್ತದೆ. ಬೆಳೆಯ ಹಂತದಲ್ಲಿ ನಿಯಮಿತವಾಗಿ ಫಾಸ್ಪರಿಕ್‌ಆಮ್ಲವನ್ನು ಬಳಸುವುದರಿಂದ ಬೆಳೆಗೆ ರಂಜಕ ಪೋಷಕಾಂಶ ಪೂರೈಸಲು ಸಹಕಾರಿಯಾಗುವುದಲ್ಲದೆ, ಹನಿ ನೀರಾವರಿಘಟಕದಲ್ಲಿಉಪ್ಪು ಶೇಖರಣೆಯಾಗುವುದನ್ನು ಸಹ ತಡೆಯಬಹುದು. ಬೆಳೆಯ ಅವಧಿ ಮುಗಿದಾಗ ಆಸಿಡ್ ಚಿಕಿತ್ಸೆಗಾಗಿ 35% ಕೇಂದ್ರೀಕೃತ ಹೈಡ್ರೋಕ್ಲೋರಿಕ್ ಆಮ್ಲವನ್ನು ಬಳಸಬೇಕು. ಆಸಿಡ್ ಚಿಕಿತ್ಸೆಯನ್ನು ಕೈಗೊಳ್ಳುವಾಗ ಕಣ್ಣುಗಳು ಮತ್ತು ಚರ್ಮದೊಂದಿಗೆಆಮ್ಲದ ಸಂಪರ್ಕವ ೧ಅಪಾಯಕಾರಿಯಾದ್ದರಿಂದ ದಯವಿಟ್ಟು ಎಲ್ಲಾ ಅಗತ್ಯ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಬೇಕೆಂದರು. ಹನಿ ನೀರಾವರಿ ವ್ಯವಸ್ಥೆಯಲ್ಲಿಕೀಟ, ಅಳಿಲು ಮತ್ತು ಇಲಿಗಳ ಹಾನಿಯನ್ನುತಡೆಗಟ್ಟಲುನೀರಾವರಿ ಮುಗಿದಾಗಅಥವಾ ಬೆಳೆ ಮುಗಿದಾಗ ಅಥವಾ ಕೊಯ್ಲು ಮಾಡುವಾಗ ಹನಿನೀರಾವರಿ ಕೊಳವೆಗಳನ್ನು ಹೊಲದಲ್ಲಿ ಬಿಡದೆ ಅವುಗಳನ್ನು ಸರಿಯಾಗಿ ನೆರಳಿನಲ್ಲಿ ಸಂಗ್ರಹಿಸಿ ಮುನ್ನೆಚ್ಚರಿಕೆಯನ್ನು ತೆಗೆದುಕೊಳ್ಳಬೇಕೆಂದರು.

ಹನಿ ನೀರಾವರಿ ವ್ಯವಸ್ಥೆಯಲ್ಲಿ ನೀರಿನಗುಣಮಟ್ಟದ ಮಾನದಂಡಗಳು ಮತ್ತುಹನಿ ನೀರಾವರಿ ವ್ಯವಸ್ಥೆಯಲ್ಲಿ ಸೂಕ್ತವಾದ ನೀರಿನಲ್ಲಿ ಕರಗುವ ರಸಗೊಬ್ಬರಗಳಕುರಿತು ಮಾಹಿತಿ ನೀಡಿದರು.



**ಹೊಸದುರ್ಗ ತಾಲ್ಲೂಕಿನ ಕೆಲ್ಲೋಡು ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ಅವಿರೋಧ ಅಧ್ಯಕ್ಷರಾಗಿ ಹೆಚ್, ಮಂಜಪ್ಪ ಉಪಾಧ್ಯಕ್ಷರಾಗಿ ಹೇಮಾವತಿ ಕರಿಬಸಪ್ಪ ಹಾಗೂ ನಿರ್ದೇಶಕರಾಗಿ ಪರಮೇಶ್ ಕಾಂತರಾಜ್, ರಾಜಮ್ಮ, ಮಂಜುನಾಥ್, ಈರಣ್ಣ, ರೇಣುಕಪ್ಪ, ಶಿವಣ್ಣ, ಟಿ, ಸಿದ್ದಯ್ಯ ಒಡೆಯರ್, ಆಯ್ಕೆಯಾದರು.**

# ವಿಜೃಂಭಣೆಯಿಂದ ರಥ ಸಪ್ತಮಿ



» **ಚಿತ್ರದುರ್ಗ**

ನಗರದ ವಾಸವಿ ವಿದ್ಯಾಸಂಸ್ಥೆಯ ಆವರಣದಲ್ಲಿ ಬುಧವಾರ ರಥಸಪ್ತಮಿ 108 ಸೂರ್ಯ ನಮಸ್ಕಾರ ಕಾರ್ಯಕ್ರಮ ನಡೆಯಿತು. ಸೂರ್ಯದೇವನಿಗೆ ಪೂಜೆ, 108 ಸೂರ್ಯ ನಮಸ್ಕಾರ ಅಗ್ನಿಹೋತ್ರ ಹಾಗೂ ಸೂರ್ಯನಿಗೆ ಅರ್ಘ್ಯ ಕೊಡುವ ಮೂಲಕ ರಥಸಪ್ತಮಿಯನ್ನು ಯೋಗ ಗುರು ಶ್ರೀಧರ್ ಅವರ ನೇತೃತ್ವದಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ವಾಸವಿ ಪತಂಜಲಿ ಯೋಗ ಸಮಿತಿಯ ಎಲ್ಲ ಯೋಗ ಬಂಧುಗಳು, ಜಿಲ್ಲಾ ಪತಂಜಲಿ ಯೋಗ ಸಮಿತಿ ಜಿಲ್ಲಾ ಅಧ್ಯಕ್ಷ ದೇವಾನಂದ ನಾಯ್ಕ್, ಯೋಗ ಗುರು ಶ್ರೀನಿವಾಸ್, ಸಂಘಟನಾ ಕಾರ್ಯದರ್ಶಿ ಜೆ.ಎಸ್.ಗುರುಮೂರ್ತಿ, ವಾಸವಿ ಶಾಲೆಯ ಕಾರ್ಯದರ್ಶಿ ಅಜೇಯ್ ಹಾಗೂ ವಿವಿಧ ಯೋಗ ಸಮಿತಿಯರು ಪಾಲ್ಗೊಂಡಿದ್ದರು. ಎಲ್ಲ ಯೋಗಬಂಧುಗಳಿಗೆ ಪ್ರಸಾದ ಹಾಗೂ ಆದಿತ್ಯ ಹೃದಯ ಹನುಮಾನ್ ಚಾಲೀಸ್ ಪುಸ್ತಕ ವಿತರಿಸಿದರು.

# ಮಾ.4 ರಿಂದ ಮಾವಿನಹಳ್ಳಿ ಬಸವೇಶ್ವರಸ್ವಾಮಿ ರಥೋತ್ಸವ

» **ಚಿತ್ರದುರ್ಗ**

ಭೀಮಸಮುದ್ರ ಮಜುರೆ ಬಸವಾಪುರದ ಮಾವಿನಹಳ್ಳಿ ಬಸವೇಶ್ವರಸ್ವಾಮಿ ರಥೋತ್ಸವ ಮಾ.4 ರಿಂದ 9 ರವರೆಗೆ ನಡೆಯಲಿದೆ ಎಂದು ಶ್ರೀ ಮಾವಿನಹಳ್ಳಿ ಬಸವೇಶ್ವರಸ್ವಾಮಿ ಟ್ರಸ್ಟ್ ತಿಳಿಸಿದೆ.

4 ರಂದು ಸ್ವಾಮಿಗೆ ಮಹಾ ರುದ್ರಾಭಿಷೇಕ ಕಂಕಣ ಧಾರಣೆ ಪಲ್ಲಕ್ಕಿ ಉತ್ಸವ ಧ್ವಜಾರೋಹಣ ಸೇವೆ, 5 ರಂದು ಅಪ್ಪೋತ್ಸವ ಸೇವೆ, ಮಾ.6 ರಂದು ವೃಷಭೋತ್ಸವ ಸೇವೆ, ಮಾ.7 ರಂದು ಬೆಳಿಗ್ಗೆ 6 ಗಂಟೆಗೆ ಹೂವಿನ ಉತ್ಸವ ಸೇವೆ, ನಂತರ ಗಜೋತ್ಸವ, ತದ ನಂತರ 10 ಗಂಟೆಗೆ ಸ್ವಾಮಿಗೆ ಕೆಂಡಾರ್ಚನೆ ಸೇವೆ ನಡೆಯಲಿದೆ.

ಮಾ 8 ರಂದು ಬೆಳಿಗ್ಗೆ 11 ಗಂಟೆಗೆ ಸಾಮೂಹಿಕ ವಿವಾಹ ಮಹೋತ್ಸವ ನಡೆಯಲಿದೆ. ಈ ಸಂದರ್ಭದಲ್ಲಿ ವಿವಾಹವಾಗುವ ಮಧು-ವರರಿಗೆ ಬಟ್ಟೆ, ತಾಳಿ ನೀಡಲಾಗುವುದು ಅಸಕ್ತರು ದೇವಸ್ಥಾನದಲ್ಲಿ ಹೆಸರನ್ನು ನೊಂದಾಯಿಸಬಹುದಾಗಿದೆ. ಸಂಜೆ 4.30 ಗಂಟೆಗೆ ಹೂವಿನ ಅಡ್ಡ ಪಲ್ಲಕ್ಕಿ ಉತ್ಸವ



ಸೇವೆ ನಡೆಯಲಿದ್ದು ತದ ನಂತರ ಸ್ವಾಮಿಯ ರಥೋತ್ಸವ ಕಾರ್ಯಕ್ರಮ ನಡೆಯಲಿದೆ, ಕೆಂಡಾರ್ಚನೆ ಮತ್ತು ರಥೋತ್ಸವ ಸಮಯದಲ್ಲಿ ಆಗಮಿಸುವ ಭಕ್ತಾದಿಗಳಿಗೆ ದಾಸೋಹ ಸೇವೆಯನ್ನು ಏರ್ಪಡಿಸಲಾಗಿದೆ.

ಮಾ. 9ರ ಶನಿವಾರ ಸಂಜೆ 4 ಗಂಟೆಗೆ ಸ್ವಾಮಿಯ ಕಂಕಣ ವಿಸರ್ಜನೆ, ಮಹಾ ಮಂಗಳಾರತಿಯೊಂದಿಗೆ ಶ್ರೀ ಸ್ವಾಮಿಯ ಸೇವಾ ಕಾರ್ಯಕ್ರಮಗಳು ಮುಕ್ತಾಯವಾಗಲಿದೆ.ಶ್ರೀ ಸ್ವಾಮಿಯ ದೇವಸ್ಥಾನದ ನೂತನ ಕಟ್ಟಡದ ಕಾರ್ಯ ಪ್ರಗತಿಯಲ್ಲಿದ್ದು ಇದರ ಅಂದಾಜು ಮೊತ್ತ ಸುಮಾರು ರೂ.5 ಕೋಟಿಗಳಾಗಿರುತ್ತದೆ. ಆದ್ದರಿಂದ ಭಕ್ತಾದಿಗಳು ನೂತನ ದೇವಸ್ಥಾನದ ನಿರ್ಮಾಣಕ್ಕೆ ಹೆಚ್ಚಿನ ಧನಸಹಾಯ ಮಾಡುವವರು ಹಾಗೂ ವಾಗ್ದಾನ ಮಾಡಿರುವವರು ಜಾತ್ರಾ ಸಮಯದಲ್ಲಿ ಹಣವನ್ನು ಕೊಟ್ಟು ಶ್ರೀ ಸ್ವಾಮಿ ಕೃಪೆಗೆ ಪಾತ್ರರಾಗಬೇಕಾಗಿ ವಿನಂತಿ ಮಾಡಲಾಗಿದೆ. ಇದ್ದಲ್ಲದೆ ಹಿಂದಿನ ವರ್ಷ ರಥೋತ್ಸವ ಸಮಯದಲ್ಲಿ ಭಾವುಟ ಮತ್ತು ಹೂವಿನ ಹಾರಗಳನ್ನು ಹರಾಜಿನಲ್ಲಿ ಪಡೆದವರು ಶ್ರೀ ಸ್ವಾಮಿಯ ರಥೋತ್ಸವದ ದಿವಸ ಹಣ ಕೊಟ್ಟು ರಸೀದಿಯನ್ನು ಪಡೆಯಬೇಕೆಂದು ಮನವಿ ಮಾಡಲಾಗಿದೆ.

# ಶಿಕ್ಷಣ ಸಚಿವರ ಜಿಲ್ಲಾ ಪ್ರವಾಸ

**ದಾವಣಗೆರೆ:** ರಾಜ್ಯದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ಅವರು ಫೆಬ್ರವರಿ 7 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಫೆಬ್ರವರಿ 7 ರಂದು ಬೆಳಿಗ್ಗೆ 8.30ಕ್ಕೆ ದಾವಣಗೆರೆ ಜಿಲ್ಲೆಯ ಜಗಳೂರಿಗೆ ಆಗಮಿಸಿ, ನಂತರ ಜಗಳೂರು ಶಾಸಕರಾದ ಬಿ.ದೇವೇಂದ್ರಪ್ಪ ಇವರ ಮನೆಗೆ ಭೇಟಿ ನೀಡುವರು. ಬೆ.9.30ಕ್ಕೆ ಜಗಳೂರು ತಾಲ್ಲೂಕಿನ ಹುಚ್ಚಂಗಿಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆಲಿರುವ ನೂತನ ಶಾಲಾ ಕಟ್ಟಡದ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸುವರು ಬೆಳಿಗ್ಗೆ 10.30ಕ್ಕೆ ಜಗಳೂರಿನಿಂದ ಚಿತ್ರದುರ್ಗಕ್ಕೆ ತೆರಳುವರು.

**ಪ್ರಮುಖ ಸುದ್ದಿ**

# ಒಂದುವರೆ ವರ್ಷದಿಂದ ಯಶಸ್ವಿಯಾಗಿ ಜವಬ್ದಾರಿ ನಿರ್ವಹಿಸಿದ್ದೇನೆ

» **ಚಿತ್ರದುರ್ಗ**

ಕಳೆದ ಒಂದುವರೆ ವರ್ಷದಿಂದ ಯಶಸ್ವಿಯಾಗಿ ಜವಬ್ದಾರಿ ನಿರ್ವಹಿಸಿದ್ದೇನೆ ಕಾರ್ಯಕರ್ತರಲ್ಲು ಧೈರ್ಯ ಸ್ಥೈರ್ಯ ತುಂಬುವ ಕೆಲಸ ಮಾಡ್ತಿದ್ದೇನೆ ರಾಜ್ಯಾಧ್ಯಕ್ಷನಾಗಿ ಮುಂದುವರೆಯುವಂತೆ ಕಾರ್ಯಕರ್ತರ ಅಪೇಕ್ಷೆ ಇದೆ ಸದ್ಯದಲ್ಲೇ ಕೇಂದ್ರದ ವರಿಷ್ಟರು ಸೂಕ್ತ ನಿರ್ಧಾರ ಕೈಗೊಳ್ತಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ತಿಳಿಸಿದರು.

ಭರಮಸಾಗರದಲ್ಲಿ ನಡೆಯುತ್ತಿರುವ ತರಳುಬಾಳು ಹುಣ್ಣಿಮೆ ಕಾರ್ಯಕ್ರಮದಲ್ಲಿ ಭಾಗಿಯಾಗಲು ಚಿತ್ರದುರ್ಗಕ್ಕೆ ಆಗಮಿಸಿದ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರರವರು ಚಿತ್ರದುರ್ಗದ ಶಿವಶರಣ ಮಾದಾರಚನ್ನಯ್ಯ ಮಠಕ್ಕೆ ಭೇಟಿ ನೀಡಿ ಮಾದಾರಚನ್ನಯ್ಯ ಶ್ರೀಗಳ ದರ್ಶನಾಶೀರ್ವಾದ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬಿಜೆಪಿ ರಾಜ್ಯಾಧ್ಯಕ್ಷರ ರೇಸ್‌ನಲ್ಲಿ ಮಾಜಿ ಶ್ರೀರಾಮುಲು ವಿಚಾರ ಶ್ರೀರಾಮುಲುಗೆ ಪೈಪೋಟಿಕೊಡುವಷ್ಟು ದೊಡ್ಡಮನುಷ್ಯ



ನಾನಲ್ಲ ರಾಮುಲು ನನಗಿಂತ ಹಿರಿಯರು,ಬಿಎಸ್ ವೈ,ಅನಂತಕುವ ಾರ್,ಕಾರಜೋಳಜೊತೆ ಪಕ್ಷ ಸಂಘಟನೆ ಮಾಡಿದ್ದಾರೆ ಅಂತಿಮವಾಗಿ ಪಕ್ಷದ ವರಿಷ್ಟರು ತೀರ್ಮಾನ ಕೈಗೊಳ್ಳಲಿದ್ದಾರೆ ರಾಜ್ಯಾಧ್ಯಕ್ಷ ಸ್ಥಾನ ಯಾರಿಗೆ ಕೊಟ್ಟರೆ ಪಕ್ಷಕ್ಕೆ ಒಳಿತಾಗಲಿದೆ ಅಂತ ವರಿಷ್ಟರು ಗಮನಹರಿಸುವರು ರಾಜ್ಯಾಧ್ಯಕ್ಷರ ಆಯ್ಕೆ ವೇಳೆ ಜಿಲ್ಲಾಧ್ಯಕ್ಷರ,ಶಾಸಕರ ಅಭಿಪ್ರಾಯಗಳ ಆಧಾರದ ಮೇಲೆ ಆಯ್ಕೆಯಾಗಲಿದೆ ನಮ್ಮ ಪಕ್ಷಏನು ತೀರ್ಮಾನ ಮಾಡಲಿದೆ ಪಕ್ಷದ ಹೈಕಮಾಂಡ್ ತೀರ್ಮಾನಕ್ಕೆ ನಾನಗಲಿ,ಮತ್ತೊಬ್ಬರಾಗಲಿ ಎಲ್ಲರು ಬದ್ದರಾಗಿರಬೇಕು ಎಂದರು.

ಜಿಲ್ಲಾಧ್ಯಕ್ಷರು, ಶಾಸಕರ ಅಪೇಕ್ಷೆ ಏನಿದೆ ಎಂಬುದರ ಆಧಾರದ ಮೇಲೆ ಪಕ್ಷ ತೀರ್ಮಾನಿಸುತ್ತದೆ ಪಕ್ಷದ ಹೈಕಮಾಂಡ್ ತೀರ್ಮಾನಕ್ಕೆ ನನ್ನ ಸೇರಿ ಎಲ್ಲರೂ ಬದ್ದರಾಗಿ ಇರಬೇಕಾಗುತ್ತದೆ ಜಿಲ್ಲಾಧ್ಯಕ್ಷರ ನೇಮಕ ಚುನಾವಣೆ ಪ್ರಕ್ರಿಯೆ ಪ್ರಕಾರವೇ ಆಗಿದೆ ರಾಜ್ಯದ ಅಧ್ಯಕ್ಷನಾಗಿ ನನ್ನ ಅಭಿಪ್ರಾಯ ಕೊಡುವ ಕೆಲಸ ಎಲ್ಲೂ ಆಗಿಲ್ಲ ಎಂದ ಅವರು ಮಠಗಳ ಭೇಟಿ ಬಗ್ಗೆ ವಿಶೇಷ ಅರ್ಥ ಕಲ್ಪಿಸುವ ಅಗತ್ಯ ಇಲ್ಲ ಮೊನ್ನೆ ತರಳುಬಾಳು ಹುಣ್ಣಿಮೆಗೆ ಬಿಎಸ್ ವೈ ಬರಬೇಕಿತ್ತು,ಬಂದಿರಲಿಲ್ಲ ಶ್ರೀಗಳ ಅಪೇಕ್ಷೆ ಮೇರೆಗೆ ನಾನು ಇಂದು ಆಗಮಿಸಿದ್ದೇನೆ ಎಂದರು.

ಬಿಜೆಪಿ ರಾಜ್ಯಾಧ್ಯಕ್ಷ ಕುರ್ಚಿಗೆ ಕಂಟಕ ಹಿನ್ನೆಲೆ ಮಠಗಳ ರೌಂಡ್ಸ್‌ಗೆ ಮುಂದಾದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಕುತೂಹಲ ಮೂಡಿಸ್ತಿರೋ ವಿಜಯೇಂದ್ರ ಮಠಗಳ ಭೇಟಿ ಚಿತ್ರದುರ್ಗದ ಮಾದಾರ ಚನ್ನಯ್ಯ ಗುರುಪೀಠಕ್ಕೆ ಆಗಮಿಸಿದ ವಿಜಯೇಂದ್ರ ಮಾದಾರ ಚನ್ನಯ್ಯ ಶ್ರೀಗಳ ಆಶೀರ್ವಾದ ಪಡೆದ ಬಿ.ವೈ ವಿಜಯೇಂದ್ರ ಬಳಿಕ ಸಿರಿಗೆರೆ ಮಠದ ತರಳಬಾಳು ಹುಣ್ಣಿಮೆ ಕಾರ್ಯಕ್ರಮಕ್ಕೆ ತೆರಳಿದ ವಿಜಯೇಂದ್ರ ಭರಮಸಾಗರದಲ್ಲಿ ನಡೆಯುತ್ತಿರುವ ಸಿರಿಗೆರೆ ಮಠದ ಕಾರ್ಯಕ್ರಮದಲ್ಲಿ ಭಾಗಿಯಾಗಿಯಾದರು

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾದ್ಯಕ್ಷರಾದ ಎ ಮುರಳಿ , ಮಾಜಿ ಉಪಮುಖ್ಯಮಂತ್ರಿಗಳು ಸಂಸದರಾದ ಗೋವಿಂದ ಕಾರಜೋಳ್ ಪರೀಷತ್ ಶಾಸಕರಾದ ಕೆ.ಎಸ್. ನವೀನ್ ಮಾಜಿ ಶಾಸಕರಾದ ಜಿ.ಹೆಚ್. ತಿಪ್ಪಾರೆಡ್ಡಿ ಎಸ್ ಕೆ ಬಸವರಾಜನ್ ಜಿ.ಪಂ.ಮಾಜಿ ಅಧ್ಯಕ್ಷರಾದ ಶ್ರೀಮತಿ ಸೌಭಾಗ್ಯ ಬಸವರಾಜನ್ ಖನಿಜ ನಿಗಮದ ಮಾಜಿ ಅಧ್ಯಕ್ಷರಾದ ಲಿಂಗಮೂರ್ತಿ, ಜಿಲ್ಲಾ ಖಜಾಂಚಿ ಮಾದುರಿ ಗಿರೀಶ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುರೇಶ ಸಿದ್ದಾಪುರ,, ರಾಂದಾಸ್ ರೈತಮೋರ್ಚಾ ವೆಂಕಟೇಶ ಯಾದವ್ ರಾಜ್ ರೈತಮೋರ್ಚಾ ಕಾರ್ಯದರ್ಶಿ ಮಲ್ಲಿಕಾರ್ಜುನ್, ಜಯಸಿಂಹ ಖಾಟ್ರೋಚ್ ರಾಜಶೇಖರ್ ನಾಗರಾಜ ಬೇದ್ರೆ ಮಾದ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್, ಸಹ ವಕ್ತಾರ ಸತ್ಯನಾರಾಯಣ ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

# ಮಾಧ್ಯಮ ಅಕಾಡೆಮಿಯಿಂದ ಛಾಯಾಚಿತ್ರ ಸ್ಪರ್ಧೆ

» **ಚಿತ್ರದುರ್ಗ**

ಕರ್ನಾಟಕ ಮಾಧ್ಯಮ ಅಕಾಡೆಮಿಯು ರಾಜ್ಯದಲ್ಲಿ ಮೊಟ್ಟ ಮೊದಲ ಬಾರಿಗೆ ಕರ್ನಾಟಕದ ಸುದ್ದಿ ಛಾಯಾಚಿತ್ರಗ್ರಾಹಕರಿಗಾಗಿ ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆ ಹಾಗೂ ಪ್ರದರ್ಶನವನ್ನು ಏರ್ಪಡಿಸಿದೆ. ಈ ಸ್ಪರ್ಧೆಯಲ್ಲಿ ಆಯ್ಕೆಯಾಗುವ ಮೊದಲ ಮೂರು ಛಾಯಾಚಿತ್ರಗಳಿಗೆ ಕ್ರಮವಾಗಿ 35,000/- ರೂ., 25,000/- ರೂ. ಹಾಗೂ 15,000/- ರೂ. ನಗದು ಬಹುಮಾನ ನೀಡಲಾಗುವುದು. ಆಯ್ದ ಅತ್ಯುತ್ತಮ ಛಾಯಾಚಿತ್ರಗಳನ್ನು ಹುಬ್ಬಳ್ಳಿ-ಧಾರವಾಡದಲ್ಲಿ ಮಾರ್ಚ್ ತಿಂಗಳಲ್ಲಿ ಅಕಾಡೆಮಿ ವತಿಯಿಂದ ಏರ್ಪಡಿಸಲಾಗುವ ಸುದ್ದಿ ಛಾಯಾಗ್ರಹಣ ಕುರಿತ ಕಾರ್ಯಾಗಾರದ ಸಂದರ್ಭದಲ್ಲಿ ಛಾಯಾಚಿತ್ರ ಪ್ರದರ್ಶನದಲ್ಲಿ ಇರಿಸಲಾಗುವುದು.

**ಸ್ಪರ್ಧೆಯ ಷರತ್ತುಗಳು:** ಈ ಸ್ಪರ್ಧೆಗೆ ಪ್ರವೇಶ ಉಚಿತವಾಗಿದ್ದು, ದಿನಾಂಕ :01-01-.202 4 ರಿಂದ 31-01-2025 ರ ಅವಧಿಯಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸ್ವೀಕರಿಸಲಾಗುವುದು. ಪ್ರತಿ ಸುದ್ದಿ ಛಾಯಾಚಿತ್ರ ಗ್ರಾಹಕರು ತಾವೇ ಚಿತ್ರಿಸಿರುವ ಎರಡು ಸುದ್ದಿ ಛಾಯಾಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸಲ್ಲಿಸಬಹುದು. ಸುದ್ದಿ ಛಾಯಾಚಿತ್ರಗಳನ್ನು ಚಿತ್ರಿಸಿರುವುದಕ್ಕೆ ಯಾವುದೇ ಭೌಗೋಳಿಕ ಪರಿಮಿತಿ ಇರುವುದಿಲ್ಲ. ಪ್ರತಿ ಸ್ಪರ್ಧಿಯೂ ಅವರು ಸುದ್ದಿ ಛಾಯಾಚಿತ್ರಗ್ರಾಹಕರಾಗಿ ಕಾರ್ಯನಿರ್ವಹಿಸುತ್ತಿರುವ ಪತ್ರಿಕೆಯ ಸಂಪಾದಕರಿಂದ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದೃಢೀಕರಣ ಪತ್ರ ಅಥವಾ ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪತ್ರಕರ್ತರಿಗಾಗಿ ನೀಡುವ Accreditation Card ಹೊಂದಿರುವವರು ಅದರ ದೃಢೀಕೃತ ಪ್ರತಿಯನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸಬೇಕು. ಛಾಯಾಚಿತ್ರಗಳ ಮೇಲೆ ಹೆಸರು, ಶೀರ್ಷಿಕೆ ಹಾಗೂ ವಾಟರ್ ಮಾರ್ಕ್‌ಗಳು ಇರಬಾರದು. ಸ್ಪರ್ಧೆಗೆ ಕಳಿಸುವ ಛಾಯಾಚಿತ್ರಗಳ ಅಂದರೆ ಡಿಜಿಟಲ್ ಇಮೇಜ್ ಗಳನ್ನು JPEGformatನಲ್ಲಿ ಮಾತ್ರಸಲ್ಲಿಸಬೇಕು. ಪ್ರದರ್ಶನಕ್ಕೆಆಯ್ಕೆಯಾಗುವ ಛಾಯಾಚಿತ್ರಗಳನ್ನು 20"x30"ಅಳತೆಯಲ್ಲಿಮುದ್ರಣಮಾಡಿಸಬೇಕಾಗಿ ರುವುದರಿಂದ ನೀವು ಕಳಿಸುವ ಇಮೇಜ್ ಗಳು 20"x 30" ಅಳತೆಯ ,300 ಆಕಖ ನಲ್ಲಿದ್ದು ಕನಿಷ್ಠ 5MB ಗಾತ್ರದಲ್ಲಿರಬೇಕು. ಮೊಬೈಲ್ ಕ್ಯಾಮೆರಾದಲ್ಲಿ ಚಿತ್ರಿಸಿರುವ ಚಿತ್ರಗಳನ್ನುಸ್ಪರ್ಧೆಗೆ ಸ್ವೀಕರಿಸಲಾಗುವುದಿಲ್ಲ. ಸ್ಪರ್ಧೆಯಲ್ಲಿ ಭಾಗವಹಿಸುವ ಸುದ್ದಿಛಾಯಾಚಿತ್ರಗಳು ಸಹಜವಾಗಿರಬೇಕು. ಚಿತ್ರದಲ್ಲಿನ ಯಾವುದೇ ಭಾಗವನ್ನು ತೆಗೆಯುವುದಾಗಲಿ ಅಥವಾ ಸೇರಿಸುವುದಾಗಲಿ ಮಾಡಿರಬಾರದು. ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಛಾಯಾಗ್ರಾಹಕರು mediaacademy.karnataka.gov.in ವೆಬ್‌ಸೈಟ್‌ನಲ್ಲಿ ಇರುವ ನಿಗದಿತ ಅರ್ಜಿಯನ್ನು Down load ಮಾಡಿಕೊಂಡು ಭರ್ತಿಮಾಡಿ, ತಮ್ಮ ಪಾಸ್ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಇಮೇಜ್ಗಳನ್ನು photo.karnatakamediaacademy@gmail.com ಇ-ಮೇಲ್ ವಿಳಾಸಕ್ಕೆ ದಿನಾಂಕ: 15-02-2025 ರಂದು ಸಂಜೆ 5:00ಗಂಟೆ ಒಳಗಾಗಿ ಸಲ್ಲಿಸತಕ್ಕದ್ದು. ನಂತರ ಬಂದ ಚಿತ್ರಗಳನ್ನು ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ.ಸ್ಪರ್ಧೆಗೆ ಬಂದಿರುವ ಛಾಯಾಚಿತ್ರಗಳನ್ನು ಪ್ರಶಸ್ತಿಗೆ ಹಾಗೂ ಪ್ರದರ್ಶನಕ್ಕೆ ಆಯ್ಕೆಮಾಡಲು ಸುದ್ದಿ ಛಾಯಾಗ್ರಹಣ ಕ್ಷೇತ್ರದಲ್ಲಿ ಅನುಭವ ಹೊಂದಿರುವ ಮೂವರು ತೀರ್ಪುಗಾರರಿದ್ದು ಅವರು ತೆಗೆದುಕೊಂಡ ತೀರ್ಮಾನವೇ ಅಂತಿಮವಾಗಿರುತ್ತದೆ. ಪ್ರಶಸ್ತಿಗೆ ಆಯ್ಕೆಯಾದ ಮೂರು ಛಾಯಾಚಿತ್ರಗಳಿಗೆ ಪ್ರಥಮ ಬಹುಮಾನ: ರೂ.35,000/ದ್ವಿತೀಯ ಬಹುಮಾನ: ರೂ. 25000, ಹಾಗೂ ತೃತೀಯ ಬಹುಮಾನ: ರೂ.15000/- ಗಳನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9448227768 ಹಾಗೂ 9449245980 ಗೆ ಸಂಪರ್ಕಿಸಬಹುದು ಮಾಧ್ಯಮ ಅಕಾಡೆಮಿ ಕಾರ್ಯದರ್ಶಿ ಎಂ.ಸಹನಾ ತಿಳಿಸಿದ್ದಾರೆ.

# ಚೌಳೂರು ನೇಕಾರರ ಸಂಘದ ಅಧ್ಯಕ್ಷರಾಗಿ ವೀರಭದ್ರಪ್ಪ ಆಯ್ಕೆ



» **ಪರಶುರಾಂಪುರ**

ಸಮೀಪದ ಚೌಳೂರು ಗ್ರಾಮದ ಉಣ್ಣೆ ಕೈಮಗ್ಗದ ನೇಕಾರರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಸಿ.ಕೆ ವೀರಭದ್ರಪ್ಪ ಹಾಗೂ ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಸಂಘದ ಆವರಣದಲ್ಲಿ ಗುರುವಾರ 2025ರ ನೂತನ ಕಾರ್ಯಕಾರಿ ಮಂಡಳಿ ರಚನೆ ಅಂಗವಾಗಿ ನಡೆದ ಚುನಾವಣೆಯಲ್ಲಿ ನಿರ್ದೇಶಕರು ಸೇರಿದಂತೆ ಅದರಲ್ಲಿ ಅಧ್ಯಕ್ಷ ಸಿ.ಕೆ ವೀರಭದ್ರಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಸಹಕಾರ ಸಂಘದ ಅಭಿವೃದ್ಧಿ ತಾಲ್ಲೂಕು ಅಧಿಕಾರಿ ಬಷೀರ್ ಖಾನ್ ತಿಳಿಸಿದರು. ನೂತನ ನಿರ್ದೇಶಕರಾಗಿ ಜೆ.ವಿ ವೀರಭದ್ರಪ್ಪ,ಬಿ.ಕೆ ವೀರಭದ್ರಪ್ಪ, ಆರ್ ಕಲ್ಲವೀರಪ್ಪ, ರತ್ನಮ್ಮ ಮಹಾಂತೇಶ, ತಿಪ್ಪಮ್ಮರತ್ನಪ್ಪ, ತಿಪ್ಪೇಸ್ವಾಮಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

## ಫಾಸ್ಟ್ ನ್ಯೂಸ್

### ಪುಸ್ತಕ ಮೇಳದಲ್ಲಿ ಮಳಿಗೆ ನಿರ್ಮಿಸಲು ಪ್ರಕಾಶಕರು, ಮಾರಾಟಗಾರರಿಂದ ಅರ್ಜಿ ಆಹ್ವಾನ

» ದಾವಣಗೆರೆ

ವಿಧಾನಸಭಾ ಸಚಿವಾಲಯದ ವತಿಯಿಂದ ಫೆಬ್ರವರಿ 27 ರಿಂದ ಮಾರ್ಚ್ 3 ರವರೆಗೆ ವಿಧಾನಸೌಧದ ಆವರಣದಲ್ಲಿ ಪುಸ್ತಕ ಮೇಳವನ್ನು ಆಯೋಜಿಸಲಾಗಿದೆ. ಪುಸ್ತಕ ಮಾರಾಟಕ್ಕೆ ಮಳಿಗೆ ಅವಶ್ಯವಿರುವ ಪ್ರಕಾಶಕರು, ಮಾರಾಟಗಾರರು ಭರ್ತಿ ಮಾಡಿದ ಅರ್ಜಿಯನ್ನು ರೂ.1000 ಡಿ.ಡಿ ಯೊಂದಿಗೆ ಫೆಬ್ರವರಿ 12 ರೊಳಗೆ ಕಾರ್ಯದರ್ಶಿಗಳು, ಕರ್ನಾಟಕ ವಿಧಾನಸಭೆ ಸಚಿವಾಲಯ, ವಿಧಾನಸೌಧ ಬೆಂಗಳೂರು-560001 ಇಲ್ಲಿಗೆ ಸಲ್ಲಿಸಲು ಕರ್ನಾಟಕ ವಿಧಾನಸಭೆ ಸಚಿವಾಲಯದ ಮುಖ್ಯ ಗ್ರಂಥಾಪಾಲಕರಾದ ಕನಕಪ್ಪ ನಲವಾಗಲ ತಿಳಿಸಿದ್ದಾರೆ.

### ಸಿದ್ದಗೊಂಡನಹಳ್ಳಿಯಲ್ಲಿ ಸನ್ ಶೈನ್ ಉತ್ಸವ

» ಹೊಸದುರ್ಗ

ತಾಲೂಕಿನ ಮತ್ತೋಡು ಹೋಬಳಿಯ ಸಿದ್ದಗೊಂಡನಹಳ್ಳಿಯಲ್ಲಿರುವ ಸುಜ್ಞಾನ ಎಜುಕೇಷನಲ್ ಟ್ರಸ್ಟ್ (ರಿ) ಸನ್ ಶೈನ್ ಪಬ್ಲಿಕ್ ಸ್ಕೂಲ್‌ನ ಸನ್‌ಶೈನ್ 3 ನೇ ವರ್ಷದ ಶಾಲಾ ವಾರ್ಷಿಕ ಉತ್ಸವವು ಫೆ.8 ರಂದು ಶನಿವಾರ ಸಂಜೆ 5 ಗಂಟೆಗೆ ಶಾಲೆಯ ಅವರಣದಲ್ಲಿ ಜರುಗಲಿದ್ದು ದಾವಣಗೆರೆ ಪೂರ್ವವಲಯದ ಪೋಲಿಸ್ ಮಹಾ ನಿರೀಕ್ಷಕ ಡಾ:ಬಿ.ಆರ್,ರವಿಕಾಂತೆಗೌಡ ಉದ್ಘಾಟಿಸಲಿದ್ದು ಸುಜ್ಞಾನ ಎಜುಕೇಷನಲ್ ಟ್ರಸ್ಟ್ ಅಧ್ಯಕ್ಷ ಎಂ.ಶಿವಲಿಂಗಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೆಂಗಳೂರಿನ ನಿವೃತ್ತ ಪೋಲಿಸ್ ಮಹಾನಿರೀಕ್ಷಕ ಎಸ್. ಎನ್.ಸಿದ್ದರಾಮಪ್ಪ,ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಹೆಚ್.ಅರ್.ರಾಜಪ್ಪ ಹಾಗೂ ಮತ್ತೋಡು ಗ್ರಾಮ ಪಂಚಾಯತಿ ಅಧ್ಯಕ್ಷೆ ಪರಮ್ಮ, ಪ್ರಾಂಶುಪಾಲ ರಾಜ್‌ಕುಮಾರ್ ಎಸ್ ಹಾಗೂ ಉಪ ಪ್ರಾಂಶುಪಾಲರಾದ ಶ್ರೀಮತಿ ಸೌಮ್ಯಕುಮಾರಿ ಸೇರಿದಂತೆ ಪಂಚಾಯಿತಿಯ ಉಪಾಧ್ಯಕ್ಷರು, ಶಾಲೆಯ ಟ್ರಸ್ಟಿಗಳು ಭಾಗವಹಿಸಲಿದ್ದಾರೆ.

### ಸಹಾಯಧನ ವಿತರಣೆ



» ಹೊಸದುರ್ಗ

ತಾಲೂಕಿನ ಶ್ರೀ ಹಾಲು ರಾಮೇಶ್ವರ ಯೋಜನಾ ಕಚೇರಿಗೆ ಸೇರಿದ ಜಾನಕಲ್ ವಲಯದ ಗೂಳಿಹಟ್ಟಿಯಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಂಘದ ಸದಸ್ಯರಾದ ಶ್ರೀಮತಿ ರತ್ನಮ್ಮ ಎನ್ನುವವರ ಮನೆಯು ಮಳೆಯಿಂದಾಗಿ ಹಾನಿಗೊಳಗಾಗಿದ್ದು. ಇದನ್ನು ಪರಿಶೀಲನೆ ಮಾಡಿದ ತಾಲೂಕಿನ ಯೋಜನಾಧಿಕಾರಿಯಾದ ಚಂದ್ರಶೇಖರ್ ಹಾನಿಗೊಳಗಾಗಿ ನೊಂದ ಕುಟುಂಬಕ್ಕೆ ಸಾಂತ್ವನವಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ 10,000 ಸಹಾಯಧನವನ್ನು ನೀಡಲಾಯಿತು. ಇದೇ ಸಂಧರ್ಬದಲ್ಲಿ ಮಾತನಾಡಿದ ಯೋಜನಾಧಿಕಾರಿ ಚಂದ್ರಶೇಖರ್ ಮನೆ ರಿಪೇರಿ ಮಾಡಿಕೊಳ್ಳಲು 2 ಲಕ್ಷ ಪ್ರಗತಿ ನಿಧಿ ನೀಡಲಾಗುವುದು ಪ್ರಗತಿ ನಿಧಿ ಪಡೆದುಕೊಂಡು ಮನೆ ರಿಪೇರಿ ಮಾಡಿಕೊಂಡು ನೆಮ್ಮದಿ ಜೀವನ ನಡೆಸುವಂತೆ ತಿಳಿಸಿದ ಅವರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಸಮಾಜದಲ್ಲಿಸಮಾಜಮುಖಿಕಾರ್ಯಕ್ರಮಗಳಾದ. ಬಡ ವಿದ್ಯಾರ್ಥಿಗಳಿಗೆ ಸುಜ್ಞಾನ ನಿಧಿ ಶಿಷ್ಯವೇತನ. ಹಳ್ಳಿಗಳ ನೀರಿನ ಮೂಲಗಳಾದ ಕೆರೆ ಕಾಮಗಾರಿ ಕಾರ್ಯಕ್ರಮ. ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆ. ನಿರ್ಗತಿಕರಿಗೆ ಮಾಸಾಸನ ಕೊಡುವಂತಹ ಕಾರ್ಯಕ್ರಮ. ಶಾಲೆ ಕಾಲೇಜುಗಳ ದುರಸ್ತಿಗೆ ಸಹಾಯಧನ. ಗ್ರಾಮಗಳ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಸಹಾಯಧನ. ಹಿಂದೂ ರುದ್ರ ಭೂಮಿಗಳ ಅಭಿವೃದ್ಧಿ. ಹಾಲಿನ ಸೊಸೈಟಿ ಅಭಿವೃದ್ಧಿ. ಹೀಗೆ ಹತ್ತು ಹಲವಾರು ಕಾರ್ಯಕ್ರಮಗಳಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಯಿಂದ ಸಹಾಯದ ನೆರವು ದೊರೆಯುತ್ತದೆ ಎಂದು ತಿಳಿಸಿದರು.

### ಸಚಿವ ಮಧು ಬಂಗಾರಪ್ಪ ಪ್ರವಾಸ ಕಾರ್ಯಕ್ರಮ

» ಚಿತ್ರದುರ್ಗ

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರಾದ ಎಸ್. ಮಧು ಬಂಗಾರಪ್ಪ ಅವರು ಫೆ. 07 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವರು ಅಂದು ಬೆಳಿಗ್ಗೆ ಜಗಳೂರು ತಾಲ್ಲೂಕು ಹುಚ್ಚಂಗಿಪುರದಿಂದ ಹೊರಟು, ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗಕ್ಕೆ ಆಗಮಿಸುವರು. ಬಳಿಕ ಇಲ್ಲಿನ ಮುರುಘರಾಜೇಂದ್ರ ಬೃಹನ್ಮಠ ಆವರಣದಲ್ಲಿನ ಅನುಭವ ಮಂಟಪದಲ್ಲಿ ಆಯೋಜಿಸಲಾಗಿರುವ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಚಿವರು ಅದೇ ದಿನ ಮಧ್ಯಾಹ್ನ 2.30 ಗಂಟೆಗೆ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

# ಮುಂದಿನ ಸಭೆಯೊಳಗೆ ಸಮುದಾಯ ಭವನ

■ ಚಿತ್ರದುರ್ಗ




ಮುಂದಿನ ಸಾಮಾನ್ಯ ಸಭೆಯ ಒಳಗಾಗಿ ನಮ್ಮ ಸೊಸೈಟಿಯ ಮೇಲೆ ಇರುವ ಜಾಗದಲ್ಲಿ ಉತ್ತಮವಾದ ಸಹಕಾರ ಸಮುದಾಯ ಭವನವನ್ನು ನಿರ್ಮಾಣ ಮಾಡುವ ಗುರಿಯನ್ನು ಹೊಂದಿದ್ದು, ಅಲ್ಲದೆ ಈ ಭಾರಿ ಸೊಸೈಟಿಯ ಸದಸ್ಯರಿಗೆ ಶೇ.25ರಷ್ಟು ಡಿವಿಡೆಂಡ್ ನೀಡುವ ಬಗ್ಗೆ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳುವುದಾಗಿ ಚಿತ್ರದುರ್ಗ ಟೌನ್ ಕೋ-ಆಪರೇಟಿವ್ ಸೊಸೈಟಿಯ ನೂತನ ಅಧ್ಯಕ್ಷರಾದ ನಿಶಾನಿ ಜಯ್ಯಣ್ಣ ರವರು ತಿಳಿಸಿದರು.

ಚಿತ್ರದುರ್ಗ ನಗರದ ವಾಸವಿ ವೃತ್ತದಲ್ಲಿನ ಚಿತ್ರದುರ್ಗ ಟೌನ್ ಕೋ-ಆಪರೇಟಿವ್ ಸೊಸೈಟಿ ಲಿ.ಗೆ ಮುಂದಿನ 5 ವರ್ಷಕ್ಕೆ ಚುನಾವಣೆಯಲ್ಲಿ ನಿಶಾನಿ ಜಯ್ಯಣ್ಣರವರ ನೇತೃತ್ವದ 12 ಜನರ ಸದಸ್ಯರ ತಂಡ ಅವಿರೋಧವಾಗಿ ಆಯ್ಕೆಯಾಗಿದೆ. ಇಂದು ಸೊಸೈಟಿಯ ಆವರಣದಲ್ಲಿ ನಡೆದ ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಸತತವಾಗಿ 5ನೇ ಬಾರಿಗೆ ಆಯ್ಕೆಯಾದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.ಈ ಸೊಸೈಟಿಯುವ 1912ರಲ್ಲಿ ಪ್ರಾರಂಭವಾಗಿ ಇದರಲ್ಲಿ ಹಾಸನದ ತಿರುಮಲಚಾರ್ಯರು ಇದನ್ನು ಸ್ಥಾಪನೆ ಮಾಡಿದ್ದಾರೆ. ಇವರು ಶಾಲಾ ಇನ್ಸ್‌ಪೆಕ್ಟರ್ ಆಗಿದ್ದು, ಮಾಜಿ ರಾಜ್ಯಪಾಲರಾದ ನಿಟ್ಟೂರು ಶ್ರೀನಿವಾಸ್ ಅಯ್ಯಂಗಾರ್, ಮಾಜಿ ಮುಖ್ಯಮಂತ್ರಿಗಳಾದ ಎಸ್ ನಿಜಲಿಂಗಪ್ಪರವರು, ಮಾಜಿ ಕೇಂದ್ರ ಸಚಿವರಾದ ಸಿ.ಕೆ.ಜಾಫರ್ ಷರೀಫ್, ಟಿ.ಎಂ. ಕೆ.ಪೀರ್ ಸಾಬ್, ಜೈನಲ್ಲುದ್ದೀನ್ ಸಾಬ್, ಭೋಜರಾಜ್, ಪಟೇಲ್ ಚಂದ್ರಶೇಖರಪ್ಪ, ಪಿಸಿಜಯ್ಯಣ್ಣ, ಶ್ರೀಮತಿ ಲಕ್ಷ್ಮಮ್ಮ ಸೇರಿದಂತೆ ಇತರರು ಈ ಸೊಸೈಟಿಯ ಆಡಳಿತವನ್ನು ನಡೆಸಿದ್ದಾರೆ ಎಂದರು.

ಪ್ರಾರಂಭದಲ್ಲಿಉತ್ತಮವಾದಸ್ಥಿತಿಯಲ್ಲಿದ್ದ ಸೋಸೈಟಿ ಕಾಲಕ್ರಮೇಣ ಕೆಲವರ ಕೈಗೆ ಸಿಕ್ಕು ನರಳಿ ನಷ್ಟವನ್ನು ಅನುಭವಿಸಿತು. 2005ರಿಂದ ಹಲವಾರು ವರ್ಷಗಳ ಕಾಲ ಹೋರಾಟವನ್ನು ಮಾಡುವುದರ ಮೂಲಕ ಸೊಸೈಟಿಯನ್ನು ಸೂಪರ್ ಸೀಡ್ ಮಾಡಿಸಿ ಸರ್ಕಾರದ ಮತ್ತು ನ್ಯಾಯಾಲಯದಲ್ಲಿ ಹೋರಾಟವನ್ನು ಮಾಡುವುದರ ಮೂಲಕ ಚುನಾವಣೆಯನ್ನು ಮಾಡಿ 2005 ರಿಂದ ನಾವು ಅಧಿಕಾರವನ್ನು ಹಿಡಿಯುವವರೆಗೂ 1.50 ಕೋಟಿ ಸೊಸೈಟಿ ನಷ್ಟದಲ್ಲಿತ್ತು. ಇದನ್ನು ತೀರಿಸಿ ಅಗ ಸೊಸೈಟಿಯ ಸುತ್ತಾ-ಮುತ್ತಲ್ಲಿನ ಪ್ರದೇಶದಲ್ಲಿ ಡಬ್ಬಗಳ ಹೆಚ್ಚಾಗಿದ್ದವು ಇದನ್ನು ಡಬ್ಬ ರಹಿತವಾಗಿ ಮಾಡಲು ತೀರ್ಮಾನ ಮಾಡಿ ಸುಮಾರು 2.50 ಕೋಟಿ ವೆಚ್ಚದಲ್ಲಿ ನೂತನವಾಗಿ ಕಟ್ಟಡವನ್ನು ನಿರ್ಮಾಣ ಮಾಡಲಾಯಿತು. ಡಬ್ಬಗಳನ್ನು ತೆಗೆದು ಕಟ್ಟಡವನ್ನು ನಿರ್ಮಾಣ ಮಾಡಿದ್ದರಿಂದ ಈಗ ಪ್ರತಿ ಮಾಹೆ 3 ರಿಂದ 4 ಲಕ್ಷ ಹಾಗೂ ಇತರಡೆ ಮೂಲಗಳಿಂದ ಸುಮಾರು 2 ರಿಂದ 2. 50 ಲಕ್ಷ ರೂ ಸೊಸೈಟಿಗೆ ಆದಾಯ ಬರುತ್ತಿದೆ ಇದರಿಂದ ನಷ್ಟ ಎನ್ನುವುದು ಇಲ್ಲವಾಗಿದೆ ಎಂದು ತಿಳಿಸಿದರು.ಡಿಸಿಸಿ ಬ್ಯಾಂಕ್ ನಲ್ಲಿ ಸೊಸೈಟಿಯ ಪ್ರಗತಿಗಾಗಿ 50 ಲಕ್ಷ ರೂ. ಗಳನ್ನು ಸಾಲವಾಗಿ ಪಡೆಯಲಾಗಿತ್ತು ಅದನ್ನು ಸಹಾ ಈಗ ತೀರಿಸಲಾಗಿದೆ. ಈಗ ಸ್ವಂತ ಬಂಡವಾಳವನ್ನು ಹೊಂದಿದೆ ಇದರಲ್ಲಿ ಹಲವಾರು ಜನ ಸೊಸೈಟಿಯಲ್ಲಿ ತಮ್ಮ ಹಣವನ್ನು ಠೇವಣಿಯಾಗಿ ಇಟ್ಟಿದ್ದಾರೆ. ಇದರಲ್ಲಿ ಅವಧಿ ಸಾಲವಾಗಿ 50 ಸಾವಿರ, ವ್ಯವಹಾರಕ್ಕಾಗಿ ಮಧ್ಯಮ ವರ್ಗದವರಿಗೆ 1 ಲಕ್ಷರೂ ವರೆಗೂ ಸಾಲವನ್ನು ನೀಡಲಾಗುತ್ತಿದೆ. ನಾವು ಇದರ ಅಧ್ಯಕ್ಷರಾದ ಮೇಲೆ ಸದಸ್ಯರಿಗೆ ಡಿವಿಡೆಂಡ್ ನೀಡಲಾಗುತ್ತಿದೆ ಕಳೆದ ಬಾರಿಯೂ ಸಹಾ ಶೇ, 16 ರಷ್ಟು ಡಿವಿಡೆಂಡ್ ನೀಡಲಾಗಿದೆ. ಮೂಂದಿನ ದಿನದದಲ್ಲಿ ಶೇ. 25 ರಷ್ಟು ಡಿವಿಡೆಂಡ್‌ನೀಡಲುತೀರ್ಮಾನಮಾಡಿದ್ದು ಇದನ್ನು ಕಾರ್ಯಕಾರಿ ಸಮಿತಿಯಲ್ಲಿ ಇಟ್ಟು ತೀರ್ಮಾನ ಮಾಡಲಾಗುವುದು. ಈ ಚುನಾವಣೆಯಲ್ಲಿಎಲ್ಲಾಜನಾಂಗದವರಿಗೂ ಸಹಾ ಪ್ರಾತಿನಿಧ್ಯವನ್ನು ನೀಡಲಾಗಿದೆ. 12 ಜನ ನಿರ್ದೇಶಕ ಸ್ಥಾನದಲ್ಲಿ 10 ಜಾತಿಗೆ ಪ್ರಾತಿನಿಧ್ಯವನ್ನು ನೀಡಲಾಗಿದೆ ಎಂದರು.

ನಗರದ ಮಧ್ಯ ಭಾಗದಲ್ಲಿ ಸೊಸೈಟಿ ಇರಿವುದರಿಂದ ಸೊಸೈಟಿಯ ಮೇಲೆ ಜಾಗ ಖಾಲಿ ಇದೆ. ಇದರಲ್ಲಿ ಸಣ್ಣ-ಪುಟ್ಟ ಕಾರ್ಯಕ್ರಮಗಳನ್ನು ಮಾಡುವ ಸಲುವಾಗಿ ಸುಮಾರು 2 ಕೋಟಿ ವೆಚ್ಚದಲ್ಲಿ ಸಹಕಾರಿ ಸಮುದಾಯ ಭವನವನ್ನು ನಿರ್ಮಾಣ ಮಾಡುವ ಉದ್ದೇಶವನ್ನು ಹೊಂದಲಾಗಿದೆ, ಇದರಿಂದ ವರ್ಷಕ್ಕೆ 30ರಿಂದ 35 ಲಕ್ಷ ರೂ ಆದಾಯ ಬರಲಿದೆ. ಸೊಸೈಟಿಯ ಇತರೆ ಮೂಲ ಹಾಗೂ ಸಮುದಾಯ ಭವನ ಸೇರಿ ವರ್ಷಕ್ಕೆ 1 ಕೋಟಿ ಆದಾಯ ಬರುವ ನಿರೀಕ್ಷೆ ಇದೆ. ಎಂದ ನಿಶಾನಿ ಜಯ್ಯಣ್ಣ ರವರು, ಬರುವ ಸೆಪ್ಟಂಬರ್ ಒಳಗಾಗಿ ಈ ಸಮುದಾಯ ಭವನವನ್ನು ಉದ್ಘಾಟನೆ ಮಾಡುವ ಹಂಬಲವನ್ನು ನೂತನ ಕಾರ್ಯಕಾರಿ ಸಮಿತಿ ಹೊಂದಿದೆ. ಸುತ್ತಾ ಮುತ್ತಾ ಜಾಗ ಇರುವುದರಿಂದ ಪಾರ್ಕಿಂಗ್ ಸಮಸ್ಯೆ ಇಲ್ಲ ಇದ್ದಲ್ಲದೆ ವಯಸ್ಸಾದವರು ಹತ್ತಿ ಹೋಗಲು ಲಿಫ್ಟ್ ವ್ಯವಸ್ಥೆಯನ್ನು ಸಹಾ ಮಾಡಲಾಗುವುದೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಲಿಯಾಕತ್ ಅಲಿ ಖಾನ್, ಸಾಧೀಖ್ ಬಾಷಾ, ಜಿ.ಸುರೇಶ್ ಕುಮಾರ್(ಭಾಘ್ನಾ) ಜೆ.ಆರ್. ಹರೀಶ್, ಜೆ.ನಿಶಾನಿ ಧಶರಥ್, ಚಂದ್ರಪ್ಪ, ಓ.ತಿಪ್ಪೇಸ್ವಾಮಿ, ಶ್ರೀನಿವಾಸ್ಮೂರ್ತಿ, ಸೂರ್ಯ ಪ್ರಕಾಶ್ ಹಾಗೂ ಎನ್. ಎಂ.ಪುಷ್ಪವಲ್ಲಿ ಮತ್ತು ಎ. ಚಂಪಕಾ ರವರು ಉಪಸ್ಥಿತರಿದ್ದರು.

# ಮಹಾತ್ಮ ಗಾಂಧಿ ನರೇಗಾ ಹಬ್ಬ: ಚಿತ್ರದುರ್ಗ ಜಿಲ್ಲೆಗೆ 3 ಪ್ರಶಸ್ತಿಗಳ ಗರಿ

» ಚಿತ್ರದುರ್ಗ




ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಾತ್ಮ ಗಾಂಧಿ ನರೇಗಾ ಯೋಜನೆ ವತಿಯಿಂದ ಬೆಂಗಳೂರು ನಗರದ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಬುಧವಾರ ನಡೆದ ನರೇಗಾ ಹಬ್ಬ-2025 ದಲ್ಲಿ ಅತ್ಯುತ್ತಮವಾಗಿ ನರೇಗಾ ಯೋಜನೆ ಅನುಷ್ಠಾನಗೊಳಿಸಿದ ಚಿತ್ರದುರ್ಗ ಜಿಲ್ಲೆಯ "ಸಾಮಾಜಿಕ ಅರಣ್ಯ ಇಲಾಖೆಗೆ ಅತ್ಯುತ್ತಮ ಜಿಲ್ಲಾ ಪ್ರಶಸ್ತಿ" ಲಭಿಸಿದೆ.

ಚಳ್ಳಕೆರೆ ತಾಲ್ಲೂಕು ಬೆಳಗೆರೆ ಗ್ರಾಮ ಪಂಚಾಯಿತಿಗೆ "ಅತ್ಯುತ್ತಮ ಗ್ರಾಮ ಪಂಚಾಯಿತಿ" ಮತ್ತು ಚಿತ್ರದುರ್ಗ ತಾಲ್ಲೂಕಿನ ದ್ಯಾಮವನಹಳ್ಳಿ ಗ್ರಾಮ ಪಂಚಾಯಿತಿಯ ರೇಷ್ಮೆ ಬೆಳೆಗಾರರಾದ ಧನಲಕ್ಷ್ಮಿ ಅವರಿಗೆ "ವಿಶೇಷ ಪ್ರಸಂಶನಾ ಪತ್ರ" ವಿತರಣೆ ಪ್ರಶಸ್ತಿಯನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ್ ಎಸ್ ಹೊರಟ್ಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ ಖರ್ಗೆ ಅವರು ವಿತರಿಸಿದರು.

"ನರೇಗಾ ಹಬ್ಬ-2025" ಪ್ರಶಸ್ತಿಗಳನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಸಾಮಾಜಿಕ ಅರಣ್ಯ ಇಲಾಖೆಯ ಹರೀಶ್. ಕೆ ಮತ್ತು ಇಲಾಖೆಯ ಅಧಿಕಾರಿಗಳು, ಬೆಳಗೆರೆ ಗ್ರಾಮ ಪಂಚಾಯಿತಿಯ ಅಧ್ಯಕ್ಷೆ ವಿಶಾಲಾಕ್ಷಿ, ಪಿಡಿಒ ದೇವೇಂದ್ರಪ್ಪ, ದ್ಯಾಮವ್ವನಳ್ಳಿ ಗ್ರಾಮ ಪಂಚಾಯತಿಯ ಧನಲಕ್ಷ್ಮಿ ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೆ. ತಿಮ್ಮಪ್ಪ, ಜಿಲ್ಲಾ ಪಂಚಾಯತಿಯ ನರೇಗಾ ಶಾಖೆಯ ಎಡಿಪಿಸಿ ಮೋಹನ್ ಕುಮಾರ್, ಜಿಲ್ಲಾ ಐಇಸಿ ಸಂಯೋಜಕ ಎಂ.ಎಸ್.ರವೀಂದ್ರನಾಥ್, ಜಿಲ್ಲಾ ಎಂಐಎಸ್ ಸಂಯೋಜಕಿ ಡಿ.ಎಂ.ಸಹನಾ ಹಾಗೂ ಲೆಕ್ಕ ವ್ಯವಸ್ಥಾಪಕ ಸಿದ್ದಲಿಂಗ ತೇಜಸ್ವ ಅವರು ಪ್ರಶಸ್ತಿಗಳನ್ನು ಸ್ವೀಕಾರ ಮಾಡಿದರು.

# ಟಿಬಿ ಮುಕ್ತ ಸಮಾಜ ನಿರ್ಮಾಣ ಮಾಡೋಣ



» ಚಿತ್ರದುರ್ಗ

ಎಲ್ಲರೂ ಕೈಜೋಡಿಸಿ ಟಿಬಿ ಮುಕ್ತ ಸಮಾಜ ನಿರ್ಮಾಣ ಮಾಡೋಣ ಎಂದು ಕಾಸವರಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಕಾವ್ಯ ಹೇಳಿದರು. ಚಿತ್ರದುರ್ಗ ತಾಲ್ಲೂಕಿನ ಕಾಸವರಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ದಂಡಿನ ಕುರುಬರಹಟ್ಟಿ ಗೇಟ್ ಬಳಿ ಇರುವ ಸಿಟಿ ಫೂಟ್ ವೇರ್ ಕಂಪನಿಯ ಆವರಣದಲ್ಲಿ 100 ದಿನಗಳ ಕ್ಷಯ ರೋಗ ನಿರ್ಮೂಲನ ತೀವ್ರ ಪ್ರಚಾರಾದೋಂಲನದಲ್ಲಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಟಿಬಿ ರೋಗವು ಒಂದು ಸಾಂಕ್ರಾಮಿಕ ರೋಗ. ಬ್ಯಾಕ್ಟೀರಿಯಾ ಸೋಂಕಿನಿಂದ ಹರಡುವ ಕಾಯಿಲೆಯಾಗಿದೆ. ರೋಗಿಯು ಕೆಮ್ಮಿದಾಗ, ಸೀನಿದಾಗ ಆತನಿಂದ ಉತ್ಪತ್ತಿಯಾದ ತುಂತುರು ಹನಿಗಳು ವಾತಾವರಣಕ್ಕೆ ಸೇರುತ್ತವ. ಆ ಉಸಿರನ್ನು ಆರೋಗ್ಯವಂತನು ಸೇವಿಸಿದಾಗ ಆತನಿಗೆ ಟಿಬಿ ರೋಗವು ಬರುವ ಸಂಭವವಿರುತ್ತದೆ ಎಂದರು. ರಾಷ್ಟ್ರೀಯ ಕ್ಷಯರೋಗ ನಿರ್ಮೂಲನೆ ಕಾರ್ಯಕ್ರಮದ ಅಡಿಯಲ್ಲಿ ನೂರು ದಿನಗಳ ತೀವ್ರ ಪ್ರಚಾರ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಟಿಬಿ ರೋಗ ಪತ್ತೆ ಹಚ್ಚುವುದು ಚಿಕಿತ್ಸೆ ನೀಡುವುದು ಪ್ರಮುಖವಾಗಿರುತ್ತದೆ ಎಂದರು. ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ಒಬ್ಬ ಕ್ಷಯ ರೋಗಿಯು 14 ಆರೋಗ್ಯವಂತ ಜನರಿಗೆ ಟಿಬಿ ರೋಗ ಅಂಟಿಸಬಹುದಾಗಿದೆ. ಹಾಗಾಗಿ ಸಮುದಾಯದಲ್ಲಿ ರೋಗವನ್ನು ಶೀಘ್ರ ಪತ್ತೆ ಮತ್ತು ತ್ವರಿತ ಚಿಕಿತ್ಸೆಗೆ ಒಳಪಡಿಸುವುದು ಪ್ರಮುಖವಾಗಿರುತ್ತದೆ. ಭಾರತದಲ್ಲಿ ಟಿಬಿ ರೋಗವು ಸಾರ್ವಜನಿಕ ಆರೋಗ್ಯ ಸಮಸ್ಯೆಯಾಗಿದೆ ಕೆಮ್ಮುವಾಗ ಸೀನುವಾಗ ಕರವಸ್ತ್ರ ಬಳಸುವ ಅಭ್ಯಾಸ ರೂಡಿಸಿಕೊಳ್ಳಬೇಕು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕ್ಷಯ ರೋಗ ವಿಭಾಗದ ಮೇಲ್ವಿಚಾರಕ ಮಹೇಂದ್ರ ಕುಮಾರ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ತುಕಾರಾಂ, ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಕಾತ್ಯಾನಮ್ಮ, ತಾಲ್ಲೂಕು ಆಶಾ ಬೋಧಕಿ ತಬಿತಾ, ಕಂಪನಿ ವ್ಯವಸ್ಥಾಪಕರು, 200ಕ್ಕೂ ಹೆಚ್ಚು ಕಾರ್ಮಿಕರು ಉಪಸ್ಥಿತರಿದ್ದರು.

# ನಕಲಿ ಪತ್ರಕರ್ತರ ಹಾವಳಿ ಹೆಚ್ಚಳ, ತಡೆಗೆ ಕಠಿಣ ಕ್ರಮ ಅನಿವಾರ್ಯ; ಡಿಸಿ

» ದಾವಣಗೆರೆ

ಜಿಲ್ಲೆಯಲ್ಲಿ ನಕಲಿ ಪತ್ರಕರ್ತರ ಹಾವಳಿ ಹೆಚ್ಚಿದ್ದು ಸಾರ್ವಜನಿಕರು ಹಾಗೂ ಅಧಿಕಾರಿಗಳಿಗೆ ಬೆದರಿಕೆ ಹಾಕುವುದು ಕಂಡು ಬಂದಿದ್ದು ಇದಕ್ಕೆ ಕಠಿಣ ಕ್ರಮ ಕೈಗೊಳ್ಳಬೇಕೆಂದು ಪತ್ರಕರ್ತರ ಸಮೂಹ ಒತ್ತಾಯಿಸಿದೆ. ಪತ್ರಕರ್ತರೆಂದು ಹೇಳಿಕೊಂಡು ಬೆದರಿಕೆ ಹಾಕುವುದು ಮತ್ತು ಇತರೆ ಉದ್ದೇಶಕ್ಕೆ ಒತ್ತಾಯಿಸುವುದು ಕಂಡು ಬಂದಲ್ಲಿ ತಕ್ಷಣ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಅಥವಾ ವಾರ್ತಾ ಇಲಾಖೆಗೆ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದ್ದಾರೆ. ಉಪಗ್ರಹ ಆಧಾರಿತ ವಿದ್ಯುನ್ಮಾನ ಸುದ್ದಿವಾಹಿನಿಗಳಲ್ಲಿ ವರದಿಗಾರರಾಗಿ ಕೆಲಸ ಮಾಡುತ್ತಿದ್ದಲ್ಲಿ ಮತ್ತು ಮುದ್ರಣ ಮಾಧ್ಯಮ ಆರ್.ಎನ್.ಐ.ಅನ್ವಯ ನಿಯಮಬದ್ಧವಾಗಿ ಹಾಗೂ ಕ್ರಮಬದ್ಧವಾಗಿ ಪ್ರಸಾರ ಹೊಂದಿರುವ ಪತ್ರಿಕೆಯ ಸಂಪಾದಕರು, ವರದಿಗಾರರನ್ನು ಮಾಧ್ಯಮ ಪ್ರತಿನಿಧಿಗಳೆಂದು ಗುರುತಿಸಲಾಗುತ್ತದೆ. ಆದರೆ ಸೋಷಿಯಲ್ ಮೀಡಿಯಾವನ್ನು ಅಂದರೆ ಯೂಟ್ಯೂಬ್‌ನ್ನು ಮಾಧ್ಯಮ ಪ್ರತಿನಿಧಿ ಎಂದು ಕರೆಯಲಾಗುವುದಿಲ್ಲ. ಕೆಲವು ವ್ಯಕ್ತಿಗಳು ಜಿಲ್ಲಾಧಿಕಾರಿಗಳ ಹೆಸರು ಮತ್ತು ಪತ್ರಕರ್ತರ ಸಂಘಟನೆಗಳ ಹೆಸರನ್ನೇಳಿ ಬೇಡಿಕೆಗಳನ್ನಿಡುತ್ತಿದ್ದಾರೆ, ಇದಕ್ಕೆ ಕಡಿವಾಣ ಹಾಕಬೇಕೆಂದು ಕಾರ್ಯನಿರತ ಪತ್ರಕರ್ತರ ಒತ್ತಾಯವಾಗಿದ್ದು ಇಂತಹ ನಕಲಿ ಪತ್ರಕರ್ತರು ಕಂಡುಬಂದಲ್ಲಿ ಮಾಹಿತಿ ನೀಡಲು ಕೋರಲಾಗಿದೆ.

## ಪ್ರಮುಖ ಸುದ್ದಿ

# ಇತಿಮಿತಿಯೊಳಗೆ ಸಾಲ ಪಡೆದು ತೀರಿಸಿ; ಬಸವಂತಪ್ಪ

» ದಾವಣಗೆರೆ



ಹಾಸಿಗೆ ಇದ್ದಷ್ಟು ಕಾಲು ಚಾಚು ಎಂಬ ಗಾದೆ ಮಾತಿನಂತೆ ಸ್ವಸಹಾಯ ಸಂಘಗಳು ಅಥವಾ ಮೈಕ್ರೋ ಫೈನಾನ್ಸ್‌ಗಳಲ್ಲಿ ನಮ್ಮ ಆರ್ಥಿಕ ಸ್ಥಿತಿಗೆ ಅನುಗುಣವಾಗಿ ಸಾಲ ಪಡೆದು ಸಕಾಲದಲ್ಲಿ ಸಾಲ ತೀರಿಸಿ. ಸಾಲ ತೀರಿಸಲು ಆಗದೆ ಅಮೂಲ್ಯ ಜೀವ ಕಳೆದುಕೊಳ್ಳಬೇಡಿ ಎಂದು ಗ್ರಾಮಸ್ಥರಿಗೆ ಶಾಸಕ ಕೆ.ಎಸ್.ಬಸವಂತಪ್ಪ ಕಿವಿಮಾತು ಹೇಳಿದರು.

ಮಾಯಕೊಂಡ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ನರಗನಹಳ್ಳಿ ಗ್ರಾಮ ಪಂಚಾಯಿತಿಗೆ ಒಳಪಡುವ ಹೊನ್ನನಾಯಕನಹಳ್ಳಿ ಗ್ರಾಮದಲ್ಲಿ ಶ್ರೀಕ್ಷೇತ್ರದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ 10 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ಅಮಾಯಕರು ಮೈಕ್ರೋ ಫೈನಾನ್ಸ್‌ಗಳು ಅಥವಾ ಸ್ವಸಹಾಯ ಸಂಘಗಳಲ್ಲಿ ಅತಿಯಾದ ಸಾಲ ಪಡೆದು ಸಾಲ ಕಟ್ಟಲು ಆಗದೆ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದನ್ನು ನೋಡಿದರೆ ನಮಗೆ ನೋವು ಆಗುತ್ತದೆ. ಕುಟುಂಬ ನಿರ್ವಹಣೆ ಬಹಳ ಕಷ್ಟ. ದಿನನಿತ್ಯ ಕೆಲಸ ಮಾಡುವುದು ಒಂದು ದಿನ ನಿಂತರೆ ಮನುಷ್ಯ ನಿಭಾಯಿಸುವುದು ಕಷ್ಟ. ಅದಕ್ಕೋಸ್ಕರ ನಾವು ಎಷ್ಟು ಹಾಸಿಗೆ ಇದೆ, ಅಷ್ಟು ಕಾಲು ಚಾಚಿಕೊಳ್ಳೋಣ. ಹೆಚ್ಚಿನ ಸಂಘಗಳಲ್ಲಿ ಸಾಲ ಪಡೆದುಕೊಳ್ಳಬೇಡಿ ಎಂದು ಮನವಿ ಮಾಡಿದರು.

ಸಾಲ ತೆಗೆದು ಹಬ್ಬ ಮಾಡಿ ಎಂದು ಯಾವ ದೇವರುಗಳು ಹೇಳುವುದಿಲ್ಲ. ನಮ್ಮ ತೃಪ್ತಿಗೋಸ್ಕರ ಹಬ್ಬ ಆಚರಿಸುತ್ತೇವೆ. ನಮ್ಮ ಇತಿಮಿತಿಯೊಳಗೆ ಹಬ್ಬ ಆಚರಿಸಬೇಕೇ ಹೊರತು, ದುಪ್ಪಟ್ಟು ಸಾಲ ಮಾಡಿ ಆಚರಿಸುವುದರಿಂದ ನಷ್ಟವೇ ಹೆಚ್ಚು. ಕೊನೆಗೆ ಸಾಲ ಕಟ್ಟಲು ಆಗದೆ ತಪ್ಪಿಸಿಕೊಂಡು ಓಡಾಡುವ ಪರಿಸ್ಥಿತಿ ಬರುತ್ತದೆ. ಇದು ನಮಗೆ ಬೇಕಾ ಎಂದು ಗ್ರಾಮಸ್ಥರನ್ನೇ ಪ್ರಶ್ನಿಸಿದರು.

ಮೈಕ್ರೋ ಫೈನಾನ್ಸ್‌ಗಳಲ್ಲಿ ಹಣ ಇರುತ್ತದೆ. ಅವರು ಹಿಂದೆ-ಮುಂದೆ ನೋಡದೆ ಸಾಲ ಕೊಡ್ತಾರೆ. ಸಾಲ ಮರಳಿ ಕಟ್ಟದಿದ್ದಾಗ ಮನೆ ಬಾಗಿಲಿಗೆ ಬಂದು ನಿಲ್ಲುತ್ತಾರೆ. ಆಗ ಮನೆ ಬಿಟ್ಟು ಓಡುವ ಪರಿಸ್ಥಿತಿ ತಂದುಕೊಳ್ಳುತ್ತಾರೆ. ಹೀಗಾಗಿ ನಮಗೆ ಎಷ್ಟು ಸಾಲ ಬೇಕೋ ಅಷ್ಟೇ ಸಾಲ ಮಾಡಿ ಮರಳಿ ಕಟ್ಟಿ. ಅದನ್ನು ಬಿಟ್ಟು ಕೊಡುವ ಎಲ್ಲಾ ಸಂಘಗಳಲ್ಲಿ, ಮೈಕ್ರೋ ಫೈನಾನ್ಸ್‌ಗಳಲ್ಲಿ ಸಾಲ ಪಡೆದು ಊರು ಬಿಡುವ ಸ್ಥಿತಿಗೆ ಬರಬೇಡಿ ಎಂದು ಮನವಿ ಮಾಡಿದರು.

ಕುಡಿಯುವ ನೀರು ಆರೋಗ್ಯದ ಮೇಲೆ ಹೆಚ್ಚು ಪರಿಣಾಮ ಬೀರುತ್ತದೆ. ಕುಡಿಯುವ ನೀರು ಶುದ್ಧವಾಗಿದ್ದರೆ ಎಷ್ಟೋ ಕಾಯಿಲೆಯನ್ನು ದೂರು ಮಾಡಬಹುದಾಗಿದೆ. ಇಂತಹದೊಂದು ಉತ್ತಮ ಕಾರ್ಯವನ್ನು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ವತಿಯಿಂದ ಮಾಡಲಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಆಶಾ ನಾಗರಾಜು, ಗ್ರಾಪಂ ಪಿಡಿಒ ಲಕ್ಷ್ಮಣ್, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯ ಪ್ರಾದೇಶಿಕ ನಿರ್ದೇಶಕಿ ಗೀತಾ, ಗ್ರಾಮದ ಮುಖಂಡರಾದ ದೇವೇಂದ್ರಪ್ಪ, ಹನುಮಂತಪ್ಪ, ತಿಪ್ಪನಾಯ್ಕ್, ಸಿದ್ದಪ್ಪ, ಕಿರಣ್, ಕಾಂತಣ್ಣ, ಮಲ್ಲೇಶ್, ಆಶಾಬಾಯಿ, ಸಂತೋಷ್ ನಾಯ್ಕ್, ರುದ್ರೇಶಪ್ಪ, ಚಂದ್ರಪ್ಪ, ಮುರುಗೇಂದ್ರಪ್ಪ, ಶಿವಾನಂದಪ್ಪ, ಮೈಲಪ್ಪ, ಯೋಗೇಶ್ ಹಾಗೂ ಗ್ರಾಮಸ್ಥರು ಇದ್ದರು.

# ಮಕ್ಕಳ ಸುರಕ್ಷತೆ: ಶಾಲಾ ವಾಹನಗಳ ನಿಯಮಗಳ ಪಾಲನೆ ಕಡ್ಡಾಯವಾಗಿ ಅನುಸರಿಸಲು ಡಿಸಿ ಸೂಚನೆ

» **ದಾವಣಗೆರೆ**

ಜಿಲ್ಲೆಯಲ್ಲಿನ ವಿವಿಧ ಶಾಲೆಗಳಿಗೆ ಕರೆದುಕೊಂಡು ಹೋಗುವ ಶಾಲಾ ವಾಹನಗಳು ಮಕ್ಕಳ ರಕ್ಷಣೆ ದೃಷ್ಟಿಯಿಂದ ಸುರಕ್ಷತಾ ಕ್ರಮ ಅನುಸರಿಸುವುದು ಅನಿವಾರ್ಯವಾಗಿದ್ದು ಪಾಲನೆ ಮಾಡದ ಶಾಲಾ ಸಂಸ್ಥೆಗಳ ಮೇಲೆ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ.ಸೂಚನೆ ನೀಡಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ತುಂಗಭದ್ರಾ ಸಭಾಂಗಣದಲ್ಲಿ ಖಾಸಗಿ ಶಾಲಾ ಆಡಳಿತ ಮಂಡಳಿ, ಶಿಕ್ಷಣ ಇಲಾಖೆ, ಸಾರಿಗೆ, ಮಕ್ಕಳ ರಕ್ಷಣಾ ಘಟಕ ಮತ್ತು ಸ್ಮಾರ್ಟ್‌ಸಿಟಿ ಯೋಜನೆ ಅಧಿಕಾರಿಗಳೊಂದಿಗೆ ಜಂಟಿ ಸಮಾಲೋಚನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿ 500 ಕ್ಕಿಂತ ಹೆಚ್ಚು ಖಾಸಗಿ ಶಾಲೆಗಳಿಂದ 1030 ಕ್ಕೂ ಹೆಚ್ಚು ಶಾಲಾ ಬಸ್‌ಗಳನ್ನು ಹೊಂದಲಾಗಿದೆ. ಆದರೆ ಮಕ್ಕಳ ಸುರಕ್ಷತಾ ದೃಷ್ಟಿಯಿಂದ ರಕ್ಷಣಾ ಕ್ರಮಗಳನ್ನು ಎಲ್ಲಾ ಶಾಲೆಯವರು ಅನುಸರಿಸುವುದು ಕಡ್ಡಾಯವಾಗಿದೆ.

ಜಿಪಿಎಸ್, ಸಿಸಿ ಕ್ಯಾಮೆರಾ ಕಡ್ಡಾಯ; ಎಲ್ಲಾ ಶಾಲಾ ವಾಹನಗಳಲ್ಲಿ ಕಡ್ಡಾಯವಾಗಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿಕೊಂಡಿರಬೇಕು. ಜಿಪಿಎಸ್ ಟ್ರ್ಯಾಕಿಂಗ್ ಸಿಸ್ಟಮ್ ಅಳವಡಿಸಿಕೊಂಡು ವಾಹನ ಸಂಚರಿಸುವ ಸ್ಥಳಗಳ ಬಗ್ಗೆ




ಮೇಲ್ವಿಚಾರಣೆಯನ್ನು ಸಂಸ್ಥೆಯವರು ಮಾಡಿಕೊಳ್ಳಬೇಕು. ವಾಹನಕ್ಕೆ ವೇಗ ನಿಯಂತ್ರಕದ ಜೊತೆಗೆ 40 ಕಿ.ಮೀ ಮಿತಿಯಲ್ಲಿಯೇ ವಾಹನಗಳನ್ನು ಚಲಾಯಿಸಬೇಕು. ಬಾಲಕಿಯರು ಇರುವುದರಿಂದ ವಾಹನದಲ್ಲಿ ಕಡ್ಡಾಯವಾಗಿ ಮಹಿಳಾ ಸಿಬ್ಬಂದಿ ಇರಲೇಬೇಕು. ವಾಹನ ಚಾಲಕರು ಚಾಲನಾ ಪರವಾನಗಿ ಹೊಂದಿ ಕನಿಷ್ಠ 6 ವರ್ಷಗಳ ಅನುಭವ ಹೊಂದಿರುವುದನ್ನು ಖಾತರಿಪಡಿಸಿಕೊಳ್ಳಬೇಕು. ಮಕ್ಕಳ ಮೇಲೆ ಯಾವುದೇ ರೀತಿಯ ಅಹಿತಕರ ದೌರ್ಜನ್ಯವಾದರೆ, ಅದನ್ನು ಪೋಕ್ಸೊ ಎಂದು ಪರಿಗಣಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪೋಷಕರೊಂದಿಗೆ ಸಭೆ; ಮಕ್ಕಳನ್ನು ಕರೆದುಕೊಂಡು ಹೋಗುವಾಗ ಸಮಯವಾಗಿದೆ ಎಂದು ವಾಹನವನ್ನು ವೇಗವಾಗಿ ಚಲಾಯಿಸುವ ಬದಲಾಗಿ, ಪೋಷಕರೊಂದಿಗೆ ಸಭೆ ನಡೆಸಿ ಮಕ್ಕಳನ್ನು ನಿಗಧಿತ ಸ್ಥಳಕ್ಕೆ ಮೊದಲೇ ಕರೆ ತರಲು ಮನವರಿಕೆ ಮಾಡಿಕೊಡಬೇಕು, ಸಮಯವಾಗಿದೆ ಎಂದು ವಿವಿಧ ಕಡೆ ಅಳವಡಿಸಿರುವ ಸಿಗ್ನಲ್‌ಗಳನ್ನು ಜಂಪ್ ಮಾಡಿ ಸಂಚರಿಸುವಂತಿಲ್ಲ. ಸಿಗ್ನಲ್ ಜಂಪ್ ಮಾಡಿರುವುದು ಕಂಡು ಬಂದಲ್ಲಿ, ಅಂತಹ ವಾಹನ ನೊಂದಣಿ ಮತ್ತು ಚಾಲಕರ ಪರವಾನಗಿಯನ್ನು ರದ್ದು ಮಾಡಲು ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದರು.ಶಾಲಾ ವಾಹನಗಳ ಎಫ್‌ಸಿ ನವೀಕರಣಕ್ಕೆ ಸೂಚನೆ; ಜಿಲ್ಲೆಯಲ್ಲಿ 1030 ಶಾಲಾ ವಾಹನಗಳಿದ್ದು ಇದರಲ್ಲಿ 350 ಕ್ಕೂ ಹೆಚ್ಚು ವಾಹನಗಳಿಗೆ ಎಫ್‌ಸಿ ನವೀಕರಣವಾಗಿರುವುದಿಲ್ಲ. ಈ ವಾಹನಗಳನ್ನು ಇದೇ ಫೆಬ್ರವರಿ 25 ರೊಳಗಾಗಿ ನವೀಕರಿಸಿಕೊಳ್ಳಬೇಕು, ಇಲ್ಲವಾದಲ್ಲಿ ಅಂತಹ ವಾಹನಗಳನ್ನು ವಶಕ್ಕೆ ಪಡೆಯಲಾಗುತ್ತದೆ. ಯಾವುದೇ ವಾಹನ ರಸ್ತೆಯಲ್ಲಿ ಸಂಚರಿಸುತ್ತಿದೆ ಎಂದಲ್ಲಿ ಅದಕ್ಕೆ ಎಫ್‌ಸಿ, ವಿಮೆ, ಚಾಲಕರಿಗೆ ಪರವಾನಗಿ, ಸ್ಪೀಡ್ ಗೌರ್‍ನರ್ ಇರಲೇಬೇಕೆಂದು ತಿಳಿಸಿದರು.

ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ಮಾತನಾಡಿ ಸಂಚಾರಿ ನಿಯಮಗಳ ಪಾಲನೇ ಮಾಡದೇ ಮತ್ತು ಚಾಲಕರ ಅಜಾಗರೂಕತೆಯಿಂದ ಪ್ರತಿನಿತ್ಯ ಅನೇಕ ಅಪಘಾತಗಳು ಸಂಭವಿಸುತ್ತಿವೆ. ಮಕ್ಕಳ ಸುರಕ್ಷತಾ ದೃಷ್ಟಿಯಿಂದ ಎಲ್ಲಾ ಶಾಲಾ ವಾಹನಗಳು ಮೋಟಾರು ವಾಹನ ಕಾಯಿದೆ ಮತ್ತು ಸಂಚಾರಿ ನಿಯಮಗಳನ್ನು ಪಾಲನೆ ಮಾಡುವುದರೊಂದಿಗೆ ವಾಹನಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಬೇಕು ಎಂದು ತಿಳಿಸಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಮುತೇಶ್ ಮಾತನಾಡಿ ಜಿಲ್ಲೆಯಲ್ಲಿರುವ ಶಾಲಾ ವಾಹನಗಳಲ್ಲಿ 112 ವಾಹನಗಳಿಗೆ 15 ವರ್ಷ ದಾಟಿದೆ. 330 ವಾಹನಗಳ ಚಾಲ್ತಿ ದಾಖಲೆಗಳಿಲ್ಲ, ಅಂತಹ ವಾಹನಗಳಿಗೆ ನೋಟೀಸ್ ನೀಡಲಾಗಿದೆ. ಈಗಾಗಲೇ 22 ವಾಹನಗಳ ಮೇಲೆ ಪ್ರಕರಣ ದಾಖಲಿಸಿದ್ದು 3 ವಾಹನಗಳನ್ನು ವಶಕ್ಕೆ ಪಡೆಯಲಾಗಿದೆ. ವಾಹನಗಳನ್ನು ಆಗಿಂದಾಗ್ಗೆ ತಪಾಸಣೆ ಮಾಡಲು ಸಾರಿಗೆ ಇನ್ಸ್‌ಪೆಕ್ಟರ್‌ಗಳಿಗೆ ನಿರ್ದೇಶನ ನೀಡಲಾಗಿದ್ದು ಶಾಲಾ ಮಕ್ಕಳ ಹಿತದೃಷ್ಟಿಯಿಂದ ಮುಂದಿನ ದಿನಗಳಲ್ಲಿ ಸಾರಿಗೆ ನಿಯಮಗಳನ್ನು ಪಾಲನೆ ಮಾಡದ ವಾಹನಗಳ ಮೇಲೆ ನಿರ್ಧಾಕ್ಷೀಣ ಕ್ರಮ ಅನಿವಾರ್ಯವಾಗಿದೆ ಎಂದರು.

ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕ ಜಿ.ಕೊಟ್ರೇಶ್, ಸ್ಮಾರ್ಟ್ ಸಿಟಿ ಎಚಿಡಿ ವೀರೇಶ್, ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಕವಿತಾ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಮಲ್ಲೇನಹಳ್ಳಿ ಕೆರೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಚಂದ್ರಪ್ಪ ಭೂಮಿಪೂಜೆ



» **ಹೊಳಲ್ಕೆರೆ**

ಅಧಿಕಾರ ಶಾಶ್ವತವಲ್ಲ. ಇದ್ದಾಗ ಎಲ್ಲರ ನೆನಪಿನಲ್ಲಿ ಉಳಿಯುವಂತ ಕೆಲಸ ಮಾಡಬೇಕೆಂಬ ಜಾಯಮಾನ ನನ್ನದು ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು. ತಾಲ್ಲೂಕಿನ ಮಲ್ಲೇನಹಳ್ಳಿ ಗ್ರಾಮದ ಹತ್ತಿರ ಒಂದು ಕೋಟಿ ರೂ.ವೆಚ್ಚದಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿಗೆ ಗುರುವಾರ ಭೂಮಿಪೂಜೆ ಸಲ್ಲಿಸಿ ಮಾತನಾಡಿದರು. ರೈತರಿಗೆ ನೀರು ವಿದ್ಯುತ್ ಎರಡು ಅತಿ ಮುಖ್ಯವಾಗಿ ಬೇಕಾಗಿರುವುದರಿಂದ ಚಿಕ್ಕಜಾಜೂರಿನ ಕೋಟೆಹಾಳ್ ಸಮೀಪ ಐದು ನೂರು ಕೋಟಿ ರೂ.ವೆಚ್ಚದಲ್ಲಿ ವಿದ್ಯುತ್ ಪವರ್ ಸ್ಟೇಷನ್ ಕಟ್ಟಿಸುತ್ತಿದ್ದೇನೆ. ಜೋಗ್‌ಫಾಲ್ಸ್‌ನಿಂದ ಇಲ್ಲಿಗೆ ನೇರವಾಗಿ ವಿದ್ಯುತ್ ಪೂರೈಕೆಯಾಗಲಿದೆ. ಇದರಿಂದ ಇನ್ನು ನೂರು ವರ್ಷಗಳ ಕಾಲ ವಿದ್ಯುತ್ ಸಮಸ್ಯೆ ರೈತರನ್ನು ಕಾಡುವುದಿಲ್ಲ ಎಂದರು. ಹಿರಿಯೂರಿನ ವಾಣಿವಿಲಾಸಸಾಗರದ ಮಧ್ಯೆ ನಲವತ್ತು ಅಡಿ ಆಳದಲ್ಲಿ ಪಿಲ್ಲರ್ ಎತ್ತಿ ಮೋಟಾರ್ ಕೂರಿಸಿ 67 ಕೋಟಿ ರೂ.ವೆಚ್ಚದಲ್ಲಿ ಫಿಲ್ಟರ್ ಅಳವಡಿಸಿ ತಾಲ್ಲೂಕಿನ ಪ್ರತಿ ಹಳ್ಳಿಯಲ್ಲಿ ಮನೆ ಮನೆಗೆ ಶುದ್ದ ಕುಡಿಯುವ ನೀರು ಇನ್ನು ನಾಲ್ಕೈದು ತಿಂಗಳಲ್ಲಿ ಪೂರೈಕೆಯಾಗಲಿದೆ. ಕ್ಷೇತ್ರಾದ್ಯಂತ ಕೆರೆ ತುಂಬಿಸುವ ಯೋಜನೆ, ಗುಣ ಮಟ್ಟದ ಆಸ್ಪತ್ರೆ, ಶಾಲಾ-ಕಾಲೇಜು, ಸಿ.ಸಿ.ರಸ್ತೆಗಳನ್ನು ನಿರ್ಮಿಸಿದ್ದೇನೆ. ವೈದ್ಯರುಗಳು ಬೇರೆ ಊರಿನಿಂದ ಬರುವುದು ಕಷ್ಟವಾಗುತ್ತದೆಂದು ವಸತಿ ಗೃಹಗಳನ್ನು ಕಟ್ಟಿಸಿದ್ದೇನೆ. ಯಾರಿಂದಲೂ ಏನನ್ನು ಹೇಳಿಸಿಕೊಳ್ಳದೆ ಎಲ್ಲಿ ಏನು ಅಗತ್ಯವಿದೆ ಎನ್ನುವುದನ್ನು ಮನಗಂಡು ಹಗಲು-ರಾತ್ರಿ ಕ್ಷೇತ್ರದ ಅಭಿವೃದ್ದಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆಂದು ತಿಳಿಸಿದರು. 31 ವರ್ಷಗಳ ಹಿಂದೆ ಪ್ರಥಮ ಬಾರಿಗೆ ಭರಮಸಾಗರ ವಿಧಾನಸಭೆಯಿಂದ ಸ್ಪರ್ಧಿಸಿ ಶಾಸಕನಾದವನು. ಹೊಳಲ್ಕೆರೆಯಲ್ಲಿ ಮೂರು ಬಾರಿ ನನ್ನನ್ನು ಗೆಲ್ಲಿಸಿ ಅಧಿಕಾರ ಕೊಟ್ಟಿದ್ದೀರ. ನಿಮ್ಮಗಳ ಋಣ ನನ್ನ ಮೇಲಿದೆ. ಸಾಸಲು ಹಳ್ಳದಿಂದ ಹಿರೇಬೆನ್ನೂರು ಸರ್ಕಲ್‌ರವರೆ ರಸ್ತೆಗೆ ನೂರು ಕೋಟಿ ರೂ.ಗಳನ್ನು ನೀಡಿದ್ದೇನೆ. ಸಾಸ್ವೆಹಳ್ಳಿ ಬಳಿ ಸೇತುವೆಗೆ ಐದು ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದ್ದೇನೆ. ಹೊಳಲ್ಕೆರೆಯಲ್ಲಿ ಹೈಟೆಕ್ ಆಸ್ಪತ್ರೆ ಕಟ್ಟಿಸಿದ್ದೇನೆ. ಸುತ್ತಮುತ್ತಲಿನ ಹತ್ತಾರು ಗ್ರಾಮಗಳ ಬಡ ರೋಗಿಗಳಿಗೆ ಅನುಕೂಲವಾಗಲಿ ಎನ್ನುವುದು ನನ್ನ ಉದ್ದೇಶ ಎಂದು ನುಡಿದರು. ಹೊಳಲ್ಕೆರೆ ಬಿಜೆಪಿ.ಮಂಡಲ ಮಾಜಿ ಅಧ್ಯಕ್ಷ ಸಿದ್ದೇಶ್, ಶರಣಪ್ಪ, ಸಿದ್ದೇಶಪ್ಪ, ಕುಮಾರ್, ಸಣ್ಣ ನೀರಾವರಿ ಇಲಾಖೆ ಇಂಜಿನಿಯರ್ ನವೀನ್ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿದ್ದರು.

### ಜೋಳ ಸಿದ್ದಿವಿನಾಯಕ, ಹುಲಿದೋಣಿ ಸಂಗಮೇಶ್ವರ ದೇವಾಲಯಗಳ ಲೋಕಾರ್ಪಣೆ ನಾಳೆ

» **ಚಿತ್ರದುರ್ಗ**

ನಗರದ ಸದಾನಂದಯ್ಯಲೇ-ಔಟ್,16ನೇ ವಾರ್ಡ್, ಎಂ.ಕೆ. ಪ್ಯಾಲೇಸ್ ಹಿಂಭಾಗದಲ್ಲಿನ ತ್ರಿಶೂಲಾಂಜನೇಯಸ್ವಾಮಿ ದೇವಸ್ಥಾನ ಆವರಣದಲ್ಲಿ ನಿರ್ಮಿಸಿರುವ ಶ್ರೀ ಜೋಳ ಸಿದ್ದಿವಿನಾಯಕ ಹಾಗೂ ಶ್ರೀ ಹುಲಿದೋಣಿ ಸಂಗಮೇಶ್ವರ ದೇವಾಲಯಗಳ ಲೋಕಾರ್ಪಣೆ ಹಾಗೂ ಪ್ರತಿಷ್ಠಾಪನಾ ಮಹೋತ್ಸವ ಕಾರ್ಯ ಕ್ರಮವೂ ಫೆ. 8 ರಿಂದ 10ರವರೆಗೆ ನಡೆಯಲಿದೆ ಎಂದು ತ್ರಿಶೂಲಾಂಜನೇಯಸ್ವಾಮಿ ದೇವಸ್ಥಾನ ಸಮಿತಿಯ ಕಾರ್ಯದರ್ಶಿಗಳಾದ ಜಿ.ಎಸ್.ಸಂಪತ್ ಕುಮಾರ್ ತಿಳಿಸಿದ್ದಾರೆ. ಸ್ವಸ್ತಿಶ್ರೀ ವಿಜಯಾಭ್ಯುದಯ ಶ್ರೀಮನ್ನೃಪ ಶಾಲಿವಾಹನ ಶಖೆ 1946ನೇ ಶ್ರೀ ಕ್ರೋಧಿನಾಮ ಸಂವತ್ಸರದ ಮಾಘ ಶುದ್ಧ ಏಕಾದಶಿಯಿಂದ ಮಾಘ ಶುದ್ಧ ತ್ರಯೋದಶಿಯವರಗೆ ನೂತನ ದೇವಾಸ್ಥಾನಗಳ ಪ್ರತಿಷ್ಠಾಪನಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಫೆ. 8 ರ ಶನಿವಾರ ಬೆಳಿಗ್ಗೆ 8-00 ಗಂಟೆಗೆ ಕಳಸದೊಂದಿಗೆ ದೇವರಮೂರ್ತಿಗಳಿಗೆ ಶ್ರೀ ಕ್ಷೇತ್ರ ಕೂಡಲಹಳ್ಳಿ ಸಂಗಮೇಶ್ವರ ಸನ್ನಿಧಾನದಲ್ಲಿ ವೇದಾವತಿ ಮತ್ತು ಸುವರ್ಣಮುಖಿ ನದಿಗಳ ಸಂಗಮ ಸ್ಥಾನದಲ್ಲಿ ಗಂಗಾಪೂಜೆ ನೆರವೇರಿಸಲಾಗುವುದು ಮಧ್ಯಾಹ್ನ 3-00 ಗಂಟೆಗೆ ರೈಲ್ವೆ ಸ್ಟೇಷನ್ ಬಳಿಯ ಆಂಜನೇಯಸ್ವಾಮಿ ದೇವಸ್ಥಾನಸಿ ಭವ್ಯ ಮೆರವಣಿಗೆ ನಡೆಯಲಿದೆ. ಫೆ. 9ರ ಬೆಳಿಗ್ಗೆ 8-00 ಗಂಟೆಗೆ ಗಣಪತಿ ಪೂಜೆ, ಪಂಚಕಳಸ ಪೂಜೆ, ಉಮಾಮಹೇಶ್ವರ ಪೂಜೆ, ನವಗ್ರಹ ಪೂಜೆ ಹಾಗೂ ಹೋಮ ಸಂಜೆ 6 ಗಂಟೆಗೆ ಶ್ರೀ ಜೋಳಸಿದ್ದಿವಿನಾಯಕ, ಶ್ರೀ ಸಂಗಮೇಶ್ವರ ಹಾಗೂ ಶ್ರೀ ನಂದಿ ವಿಗ್ರಹಗಳ ಸ್ಥಾಪನೆ ಸಂಜೆ 7 ಗಂಟೆಗೆ ಸಾಂಸ್ಕೃತಿಕ ಮನರಂಜನೆ, ಭಜನಾ ಕಾರ್ಯಕ್ರಮಗಳ ನಡೆಯಲಿದೆ.

## ಇಂದು ಗ್ರಾಮದೇವತೆ ಶ್ರೀಕುಕ್ವಾಡೇಶ್ವರಿ ದೇವಿಯ ನೂತನ ದೇವಸ್ಥಾನ ನಿರ್ಮಾಣಕ್ಕೆ ಭೂಮಿ ಪೂಜೆ

» **ಎಸ್.ವೇದಮೂರ್ತಿ ಹೊಳಲ್ಕೆರೆ**

ಹೊಳಲ್ಕೆರೆ : ಪಟ್ಟಣದ ಗ್ರಾಮದೇವತೆ ಶ್ರೀಕುಕ್ವಾಡೇಶ್ವರಿ ದೇವಿಯ ನೂತನ ದೇವಸ್ಥಾನ ನಿರ್ಮಾಣಕ್ಕೆ ಭೂಮಿ ಪೂಜೆ ಹಾಗೂ ಶಂಕುಸ್ಥಾಪನೆ ಕಾರ್ಯಕ್ರಮವನ್ನು ಹೊಳಲ್ಕೆರೆ ಪಟ್ಟಣದ ಶಿವಮೊಗ್ಗ ರಸ್ತೆಯಲ್ಲಿರುವ ಕುಕ್ವಾಡೇಶ್ವರಿ ದೇವಸ್ಥಾನದ ಆವರಣದಲ್ಲಿ ಶುಕ್ರವಾರ ಮುಂಜಾನೆ 8 ಗೆ ವಿವಿಧ ಸಂಪ್ರದಾಯ ನೆರವೇರಿಸುವ ಮೂಲಕ ಹಮ್ಮಿಕೊಳ್ಳಲಾಗಿದೆ.

ಹಾದಿಶಕ್ತಿಯ ಸ್ವರೂಪಿನಿ ಎನ್ನುವ ಖ್ಯಾತಿಯ ಗ್ರಾಮ ದೇವತೆ ಕುಕ್ವಾಡೇಶ್ವರಿ ದೇವಿ ಭಕ್ತರ ಇಷ್ಟಾರ್ಥ ಸಿದ್ದಿಗಾಗಿ ಇಲ್ಲಿ ನೆಲೆಸಿ ಲೋಕಕಲ್ಯಾಣ ನೆರವೇರಿಸುತ್ತಿದ್ದಾಳೆ ಎನ್ನುವ ಭಕ್ತರ ನಂಭಿಗೆ ಅನಾಧಿಕಾಲದಿಂದ ಇದ್ದು, ಇದುವರೇಗೂ ಚಿಕ್ಕದಾದ ದೇವಸ್ಥಾನದಲ್ಲಿದ್ದ ದೇವಿಯ ಅಶಯದಂತೆ ಭಕ್ತರು ಸುಮಾರು 4 ಕೋಟಿ ಹಣದಲ್ಲಿ ಬೃಹತ್ ಮಾಧರಿಯ ಕಲ್ಲಿನಿಂದ ದೇವಸ್ಥಾನ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲು ಸಿದ್ದತೆ ಕೈಗೊಂಡಿದ್ದು, ಶುಕ್ರವಾರ ಮುಂಜಾನೆ ನಾನಾ ಸಂಪ್ರಾಯದ ಜತೆ ಪೂಜೆ ಸಲ್ಲಿಸಿ ನಾಡಿನ ಮಠಾಧೀಶರ, ಸಾದು ಸಂತರ, ಸಾವಿರಾರು ಭಕ್ತರ ಸಮಷಮ ಭೂಮಿ ಪೂಜೆ ಸಲ್ಲಿಸಿ ದೇವಸ್ಥಾನದ ನಿರ್ಮಾಣಕ್ಕೆ ಅಡಿಗಲ್ಲು ಹಾಕಲಾಗುತ್ತಿದೆ.

ಶಂಕುಸ್ಥಾಪನೆ ಹಿನ್ನೇಲೆಯಲ್ಲಿ ಮುಂಜಾನೆ ನೂರಾರು ಮಹಿಳೆಯರಿಂದ ಪಟ್ಟಣದ ಕಾಲಭೈರವ ದೇವಸ್ಥಾನದ ಪುಷ್ಕರಣಿಯಲ್ಲಿ ನೂರೊಂದು ಕುಂಬಗಳಿಗೆ ಗಂಗಾಪೂಜೆ ಸಲ್ಲಿಸಿ ಕುಂಬ ಹೊತ್ತ ಮೆರವಣಿಗೆ ಜತೆ ವಿವಿಧ ವಾದ್ಯಗಳೊಂದಿಗೆ ಪಟ್ಟಣದ ರಾಜಬೀದಿಗಳಲ್ಲಿ ಕುಕ್ವಾಡೇಶ್ವರಿ ದೇವಿ ಮೆರವಣಿಗೆ ನಡೆಸಲಾಗುತ್ತದೆ. ಶಂಕುಸ್ಥಾಪನೆಯ ದಿವ್ಯ ಸಾನಿಧ್ಯವನ್ನು ಕನಕ ಗುರುಪೀಠ ಕಾಗಿನೆಲೆ



ಮಹಾಸಂಸ್ಥಾನದ ಶ್ರೀ ನಿರಂಜನಾನಂದಪುರಿ ಮಹಾಸ್ವಾಮಿಗಳು, ಹೊಸದುರ್ಗ ಕುಂಚಿಟಿಗ ಸಂಸ್ಥಾನದ ಶ್ರೀ ಶಾಂತವೀರ ಮಹಾಸ್ವಾಮಿಗಳು, ರಾಜಗನಹಳ್ಳಿ ವಾಲ್ಮೀಕಿ ಮಹಾಸಂಸ್ಥಾನದ ಶ್ರೀ ಪ್ರಸನ್ನಾನಂದಾಪುರಿ ಮಹಾಸ್ವಾಮಿಗಳು, ಚಿತ್ರದುರ್ಗದ ಮಾದಾರ ಚನ್ನಯ್ಯ ಮಠದ ಶ್ರೀ ಬಸವ ಪ್ರಿಯ ಮಾದರ ಚೆನ್ನಯ್ಯ ಮಹಾಸ್ವಾಮಿಗಳು, ಭಗಿರಥ ಪೀಠದ ಶ್ರೀ ಪುರುಷೋತ್ತಮಾನಂದ ಮಹಾಸ್ವಾಮಿಗಳು, ಹೊಸದುರ್ಗ ಕನಕಪೀಠದ ಶ್ರೀ ಈಶ್ವರಾನಂದಪುರಿ ಮಹಾಸ್ವಾಮಿಗಳು, ಲಂಬಾಣಿ ಗುರುಪೀಠದ ಸೇವಾಲಾಲ್ ಮಹಾಸ್ವಾಮಿಗಳು ವಹಿಸಲಿದ್ದಾರೆ.

ಅಧ್ಯಕ್ಷತೆಯನ್ನು ಕುಕ್ವಾಡೇಶ್ವರಿ ಜೀರ್ಣೋದ್ದಾರ ಸಮಿತಿ ಅಧ್ಯಕ್ಷ ಬಿ.ಎಸ್.ರುದ್ರಪ್ಪ ವಹಿಸಲಿದ್ದು, ಚಿತ್ರದುರ್ಗದ ಲೋಕಸಭಾ ಸದಸ್ಯ ಗೋವಿಂದ ಎಂ ಕಾರಜೋಳ, ಶಾಸಕ ಡಾ.ಎಂ.ಚಂದ್ರಪ್ಪ, ಹೊಸದುರ್ಗ ಕ್ಷೇತ್ರದ ಶಾಸಕ ಬಿ.ಜಿ.ಗೋವಿಂದಪ್ಪ, ಸಾಗರ ಕ್ಷೇತ್ರದ ಶಾಸಕ ಬೇಲೂರು ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಮಾಜಿ ಸಚಿವರಾದ ಎಚ್ .ಆಂಜನೇಯ, ಮಾಜಿ ಸಂಸದರಾದ ಬಿ.ಎನ್. ಚಂದ್ರಪ್ಪ, ಎ.ನಾರಾಯಣಸ್ವಾಮಿ, ಪುರಸಭೆಯ ಅಧ್ಯಕ್ಷ ವಿಜಯಸಿಂಹ ಖಾಟ್ರೋತ್, ಪುರಸಭೆಯ ಉಪಾಧ್ಯಕ್ಷೆ ಹೆಚ್.ಆರ್.ನಾಗರತ್ನ ವೇದಮೂರ್ತಿ ಉಪಸ್ಥಿತಿಯಲ್ಲಿ, ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಎ.ವಿ.ಉಮಾಪತಿ, ಪಿ. ರಮೇಶ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಪಿ.ಆರ್.ಶಿವಕುಮಾರ್, ಮಾಜಿ ಉಪಾಧ್ಯಕ್ಷ ಬಿ. ಗಂಗಾಧರ್, ಮಾಜಿ ಸದಸ್ಯರಾದ ಸವಿತಾ ರಘು, ಪುರಸಭೆಯ ಮಾಜಿ ಅಧ್ಯಕ್ಷ ಆರ್ .ಎ.ಅಶೋಕ್, ಮಾಜಿ ಉಪಾಧ್ಯಕ್ಷ ಕೆ.ಸಿ.ರಮೇಶ್, ಪಿ.ಆರ್.ಮಲ್ಲಿಕಾರ್ಜುನ, ಡಿ.ಎಸ್. ವಿಜಯ್, ಮಮತಾ ಜಯಸಿಂಹ ಖಾಟ್ರೋತ್, ಪಿ.ಎಚ್.ಮುರುಗೇಶ್, ಷಬೀನ ಆಶ್ರಫ್ ವುಲ್ಲಾ, ಸೈಯದ್ ಸಜಿಲ್, ಸೈಯದ್ ಮನ್ಸೂರ್, ಪೂರ್ಣಿಮಾ ಬಸವರಾಜು, ಸುಧಾ ಬಸವರಾಜ್ ಯಾದವ್, ಸವಿತಾ ನರಸಿಂಹ ಖಾಟ್ರೋತ್, ವಸಂತ ರಾಜಪ್ಪ, ಮಂಜುನಾಥ್ ಸಂಗನಗುಂಡಿ, ಬಸವರಾಜ್ ಜಿ.ಎಚ್, ಮಜರುಲ್ಲಾಖಾನ್, ದೇವಸ್ಥಾನ ಸಮಿತಿ ಕಾರ್ಯದರ್ಶಿ ಶಿಕ್ಷಕ ವರದರಾಜ್, ಸದಸ್ಯರಾದ ಬಸವರಾಜ್ ಸೇರಿ ಹಲವಾರು ಮುಖಂಡರು ಪಾಲ್ಗೊಳ್ಳಲಿದ್ದಾರೆ.

## ಪ್ರತಿನಿತ್ಯ ಕೈಕೊಡುವ ವಿದ್ಯುತ್; ರೈತರಿಂದ ಪ್ರತಿಭಟನೆ: ಹೋರಾಟದ ಎಚ್ಚರಿಕೆ ನೀಡಿದ ರೆಡ್ಡಿಹಳ್ಳಿ ವೀರಣ್ಣ



» **ಚಳ್ಳಕೆರೆ**

ಗ್ರಾಮೀಣ ಭಾಗಗಳಲ್ಲಿ ಪ್ರತಿನಿತ್ಯ ವಿಶೇಷವಾಗಿ ಸಂಜೆ ವೇಳೆಯಲ್ಲಿ ಪದೇ, ಪದೆ ವಿದ್ಯುತ್ ಕೈಕೊಡುವುದರಿಂದ ವಿದ್ಯಾರ್ಥಿಗಳು ಹಾಗೂ ರೈತರು ಸಂಕಷ್ಟಕ್ಕೀಡಾಗಿದ್ದು, ಬೆಸ್ಕಾಂ ಇಲಾಖೆ ಈ ಬಗ್ಗೆ ಗಮನಹರಿಸದೇ ಇದ್ದರೆ ಉಗ್ರಹೋರಾಟ ಕೈಗೊಳ್ಳಲಾಗುವುದು ಎಂದು ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆ(ಪ್ರೊ.ಬಣ) ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ ತಿಳಿಸಿದರು.

ಅವರು, ಗುರುವಾರ ಬೆಸ್ಕಾಂ ಕಚೇರಿ ಮುಂದೆ ತಳಕು ಹೋಬಳಿ ವರವು ಗ್ರಾಮದಲ್ಲಿ ಪ್ರತಿನಿತ್ಯ ವಿದ್ಯುತ್ ತೊಂದರೆಯಿಂದ ರೋಸಿದ ರೈತರು ಹಾಗೂ ಸಾರ್ವಜನಿಕರು ನಡೆಸಿದ ಪ್ರತಿಭಟನೆಯ ನೇತೃತ್ವ ವಹಿಸಿ ಮಾತನಾಡಿದರು. ಈಗಾಗಲೇ ಹಲವು ಬಾರಿ ಹೋರಾಟ ನಡೆಸಿದ ಸಂದರ್ಭದಲ್ಲಿ ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ವಿದ್ಯುತ್ ಅಡಚರಣೆಯನ್ನು ನಿವಾರಿಸುವಂತೆ ಹಲವಾರು ಬಾರಿ ಮನವಿ ಮಾಡಿಕೊಂಡಿದ್ದೇವೆ. ಆದರೆ, ಇಲಾಖೆ ಅಧಿಕಾರಿಗಳು ಮಾತ್ರ ಈ ಬಗ್ಗೆ ಯಾವುದೇ ಕ್ರಮವಹಿಸಿಲ್ಲ. ವಿದ್ಯುತ್ ಕಣ್ಣಾಮುಚ್ಚಾಲೇ ಆಟ ಮುಂದುವರೆದಿದೆ. ಈ ಬಗ್ಗೆ ಕ್ರಮ ಜರುಗಿಸದೇ ಇದ್ದರೆ ಸಾವಿರಾರು ರೈತರೊಂದಿಗೆ ಬೆಸ್ಕಾಂ ಕಚೇರಿಗೆ ಆಗಮಿಸಿ ಪ್ರತಿಭಟಿಸುವುದಾಗಿ ತಿಳಿಸಿದರು. ಹೋರಾಟದಲ್ಲಿ ಗ್ರಾಮಸ್ಥರು ಹಾಗೂ ರೈತರು ಪಾಲ್ಗೊಂಡಿದ್ದರು. ಮನವಿ ಸ್ವೀಕರಿಸಿದ ಬೆಸ್ಕಾಂ ಇಲಾಖೆ ಅಧಿಕಾರಿ, ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆಯನ್ನು ಬಗೆಹರಿಸುವ ಭರವಸೆ ನೀಡಿದರು.

**ಪ್ರಮುಖ ಸುದ್ದಿ**

# ವಿದ್ಯಾರ್ಥಿ ಜ್ಞಾನ ಹೆಚ್ಚಿಸುವಲ್ಲಿ ಇಂಗ್ಲೀಷ್ ಸಹಕಾರಿ

» **ಚಳ್ಳಕೆರೆ**

ತಾಲ್ಲೂಕಿನ ತಳಕು ಹೋಬಳಿಯ ಕೋಡಿಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕ್ಲಸ್ಟರ್ ಮಟ್ಟದ ಇಂಗ್ಲೀಷ್ ಕಲಿಕಾ ಹಬ್ಬವನ್ನು ಹಮ್ಮಿಕೊಂಡಿದ್ದು ಕ್ಷೇತ್ರ ಶಿಕ್ಷಣಾಧಿಕಾರಿಗಳ ಪರವಾಗಿ ಶಿಕ್ಷಣ ಸಂಯೋಜಕ ಮಾರುತಿಭಂಡಾರಿ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಇಂಗ್ಲೀಷ್ ವ್ಯಾಮೋಹದಿಂದ ಪೋಷಕರು ಖಾಸಗಿ ಶಾಲೆಗಳಿಗೆ ತಮ್ಮ ಮಕ್ಕಳನ್ನು ಸೇರ್ಪಡೆ ಮಾಡುತ್ತಿದ್ದಾರೆ. ಶೈಕ್ಷಣಿಕ ಪ್ರಗತಿಗೆ ಇಂಗ್ಲೀಷ್ ಜ್ಞಾನದ ಅವಶ್ಯಕತೆ ಹೆಚ್ಚಿದೆ. ಯಾವುದೇ ಕಲಿಕೆ ಪೂರ್ಣವಾಗಬೇಕಾದಲ್ಲಿ ಇಂಗ್ಲೀಷ್ ಭಾಷೆ ಬೇಕು. ವಿಶೇಷವಾಗಿ ವಿಶ್ವದ ಎಲ್ಲೆಡೆ ಇಂಗ್ಲೀಷ್ ಭಾಷೆ ತನ್ನದೇಯಾದ ಸ್ಥಾನಮಾನ ಹೊಂದಿದೆ. ಆದರೆ, ಗ್ರಾಮೀಣ ಮಟ್ಟದ ಸರ್ಕಾರಿ ಶಾಲೆಯಲ್ಲಿ ಈ ಭಾಗದ





ಇಂಗ್ಲೀಷ್ ಬೋಧಕರು ಈ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಗ್ರಾಮೀಣ ವಿದ್ಯಾರ್ಥಿಗಳು ಸಹ ಸರ್ಕಾರಿ ಶಾಲೆಗೆ ದಾಖಲಿಸಿ ಇಂಗ್ಲೀಷ್ ಭಾಷೆಯನ್ನು ಅಭ್ಯಾಸ ಮಾಡುವ ಸ್ಥಿತಿ ನಿರ್ಮಾಣಮಾಡಿದ್ದಾರೆ. ಶಿಕ್ಷಣ ಇಲಾಖೆ ಪರವಾಗಿ ಕಾರ್ಯಕ್ರಮಕ್ಕೆ ಶ್ರಮಿಸಿದ ಎಲ್ಲರನ್ನೂ ಅಭಿನಂದಿಸುವುದಾಗಿ ತಿಳಿಸಿದರಲ್ಲದೆ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆಂದರು.

ಇಂಗ್ಲೀಷ್ ಭಾಷಾ ಶಿಕ್ಷಕರಾದ ಸುಶೀಲಮ್ಮ, ಸುಪ್ರೀಯ ಮಾತನಾಡಿ, ಈ ಭಾಗದ ಒಟ್ಟು 15ಕ್ಕೂ ಹೆಚ್ಚು ಶಾಲೆಗಳ ಒಂದರಿಂದಏಳನೇ ತರಗತಿಯ 120 ಮಕ್ಕಳು ಇಂಗ್ಲೀಷ್ ಕಲಿಕಾ ಹಬ್ಬ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ಎಲ್ಲರೂ ಆಸಕ್ತಿಯಿಂದ ಕಾರ್ಯಕ್ರಮ ವೀಕ್ಷಿಸಿದ್ದಲ್ಲದೆ, ತಮ್ಮ ಮಾದರಿಗಳನ್ನು ಸಿದ್ದಪಡಿಸಿ ಇಂಗ್ಲೀಷ್ ಭಾಷೆಯಲ್ಲಿ ವಿವರಿಸಿದ್ದಾರೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳೂ ಇಂಗ್ಲೀಷ್ ಕಲಿಕೆಯ ಬಗ್ಗೆ ಆಸಕ್ತಿ ಮೂಡಿದ್ದು ಸಂತಸ ತಂದಿದೆ ಎಂದರು.

ಗ್ರಾಮ ಪಂಚಾಯಿತಿ ಸದಸ್ಯೆ ದ್ರಾಕ್ಷಾಯಣಮ್ಮ, ಎಸ್‌ಡಿಎಂಸಿ ಅಧ್ಯಕ್ಷ ನಾಗರಾಜ, ಉಪಾಧ್ಯಕ್ಷ ಶಿವಣ್ಣ, ಸಿಆರ್‌ಪಿ ಸುರೇಶ್, ಮುಖ್ಯಶಿಕ್ಷಕಿ ರತ್ನಮ್ಮ, ಬಸವರಾಜು, ಆಶಾ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T